# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 241 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 13–04–2024 ಶನಿವಾರ | ಪುಟ: 4 | ಬೆಲೆ : ರೂ.2–00
Volume - 01 Issue - 241 | Title- Code: KARKAN 28269 | Chitradurga | Date: 13-04-2024 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಕಾರಜೋಳ ಬುದ್ಧಿವಂತನಾಗಿದ್ದರೆ ಇಲ್ಲಿಗೆ ಬಂದು ಸ್ಪರ್ಧಿಸುತ್ತಿರಲಿಲ್ಲ: ಕೆಎಚ್ಎಂ 2

ದಲಿತ ವಿರೋಧಿ ಕಾಂಗ್ರೆಸ್‌ಗೆ ತಕ್ಕ ಪಾಠಕಲಿಸಿ: ಬಿಜೆಪಿ ರಾಜ್ಯಾಧ್ಯಕ್ಷ 3

ಗೋಶಾಲೆಗಳಲ್ಲಿ ಜಾನುವಾರಗಳ ಸಂರಕ್ಷಣೆ ಜೊತೆಗೆ ಸ್ವಚ್ಛತೆ ಕಾಪಾಡಿ 4



ಸುದ್ದಿ, ಜಾಹಿರಾತಿಗೆ
9686622252


**ಶುಭ ನುಡಿ**

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಮದುವೆ ಮನೆಯಲ್ಲಿ ಮತದಾನ ಜಾಗೃತಿ



» **ದಾವಣಗೆರೆ**

18 ನೇ ಲೋಕಸಭಾ ಚುನಾವಣೆಗೆ ಸಾರ್ವತ್ರಿಕ ಚುನಾವಣೆ ನಡೆಯುತ್ತಿದೆ. ಚುನಾವಣೆಯಲ್ಲಿ ಎಲ್ಲಾ ಮತದಾರರು ಮತದಾನ ಮಾಡಬೇಕೆಂದು ಸ್ವೀಪ್ ಸಮಿತಿಯಿಂದ ಜಾಗೃತಿ ಮೂಡಿಸಲಾಗುತ್ತಿದ್ದು ಜಗಳೂರು ತಾಲ್ಲೂಕಿನ ಗುರುಸಿದ್ದಾಪುರದಲ್ಲಿ ಹಾಲೇಶ್ ಮತ್ತು ಪ್ರೀತಿ ಇವರ ಮದುವೆ ಮನೆಯಲ್ಲಿ ಮತದಾನ ಜಾಗೃತಿ ಮೂಡಿಸುವ ಮೂಲಕ ನವ ದಂಪತಿಗಳು ಸೇರಿದಂತೆ ಬಂದು, ಬಾಂಧವರು ಮತದಾನದಲ್ಲಿ ಕಡ್ಡಾಯವಾಗಿ ಭಾಗವಹಿಸಬೇಕೆಂದು ಕರೆ ನೀಡಲಾಯಿತು.

ಸ್ವೀಪ್ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಸಿಬ್ಬಂದಿಯವರು ಭಾಗವಹಿಸಿದ್ದರು.

# 5 ಗ್ಯಾರಂಟಿಗಳ ಮೂಲಕ ಬಡವರ ಕಲ್ಯಾಣಕ್ಕೆ ಕಾಂಗ್ರೆಸ್ ಅಸ್ತು: ಶಾಸಕ



» **ಚಳ್ಳಕೆರೆ**

ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷದ ನೇತೃತ್ವ ಸರ್ಕಾರ ಚುನಾವಣೆ ಸಂದರ್ಭದಲ್ಲಿ ನೀಡಿದ ಐದು ಗ್ಯಾರಂಟಿಗಳನ್ನು ಜಾರಿಗೊಳಿಸುವ ಮೂಲಕ ರಾಜ್ಯ ಬಡ ಜನರ ಕಲ್ಯಾಣಕ್ಕೆ ಶ್ರಮಿಸುತ್ತಿದೆ. ಕೇಂದ್ರದಲ್ಲೂ ಸಹ ಎಐಸಿಸಿ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ, ಎಐಸಿಸಿ ಉಪಾಧ್ಯಕ್ಷ ರಾಹುಲ್‌ಗಾಂಧಿ ಅನೇಕ ಕೊಡುಗೆಗಳನ್ನು ನೀಡಿದ್ದು, ಲೋಕಸಭಾ ಚುನಾವಣೆಯಲ್ಲಿ ಈ ಕ್ಷೇತ್ರದ ಅಭ್ಯರ್ಥಿ ಬಿ.ಎನ್.ಚಂದ್ರಪ್ಪನವರಿಗೆ ಮತ ನೀಡಿ ಲೋಕಸಭೆಗೆ ಆಯ್ಕೆ ಮಾಡಿಕಳಿಸಿ ಎಂದು ಕ್ಷೇತ್ರದ ಶಾಸಕ, ಕರ್ನಾಟಕ ರಾಜ್ಯ ಸಣ್ಣಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಮತದಾರರಲ್ಲಿ ಮನವಿ ಮಾಡಿದರು.



ಅವರು, ಶುಕ್ರವಾರ ಕ್ಷೇತ್ರ ವ್ಯಾಪಿಯ ಜಾಜೂರು, ಪಗಡಲಬಂಡೆ, ಚನ್ನಮ್ಮನಾಗತಿಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಗಳ ಗ್ರಾಮಗಳಲ್ಲಿ ಅಭ್ಯರ್ಥಿ ಬಿ.ಎನ್.ಚಂದ್ರಪ್ಪಪರ ಮತಯಾಚನೆ ಮಾಡಿದರು. ಬಿ.ಎನ್.ಚಂದ್ರಪ್ಪ ಈ ಹಿಂದೆ ಈ ಕ್ಷೇತ್ರದ ಲೋಕಸಭಾ ಸದಸ್ಯರಾಗಿ ಹಲವಾರು ಜನಪರ ಯೋಜನೆಗಳಿಗೆ ಸಹಕಾರ ನೀಡಿದ್ದಾರೆ. ಲೋಕಸಭೆಯಲ್ಲೂ ಸಹ ಈ ಕ್ಷೇತ್ರದ ಸಮಸ್ಯೆಗಳ ಬಗ್ಗೆ ಸರ್ಕಾರದ ಗಮನ ಸೆಳೆದಿದ್ದಾರೆ. ಮತ್ತೊಮ್ಮೆ ಪಕ್ಷ ಅವರಿಗೆ ಸ್ಪರ್ಧಿಸಲು ಅವಕಾಶ ಮಾಡಿಕೊಟ್ಟಿದ್ದು, ನೀವೆಲ್ಲರೂ ಅವರಿಗೆ ಮತ ನೀಡುವ ಮೂಲಕ ಪಕ್ಷದ ಆಯ್ಕೆಯನ್ನು ಸಮರ್ಥಿಸಬೇಕು ಎಂದರು. ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಟಿ.ಪ್ರಭುದೇವ್, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಟಿ.ಶಶಿಧರ, ಚನ್ನಕೇಶವ, ಕೆಎಂಎಫ್ ನಿರ್ದೇಶಕ ಸಿ.ವೀರಭದ್ರಬಾಬು, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಗದ್ದಿಗೆತಿಪ್ಪೇಸ್ವಾಮಿ, ಸಿ.ಟಿ.ಶ್ರೀನಿವಾಸ್, ಡಿ.ಕೆ.ಕಾಟಯ್ಯ, ರೆಡ್ಡಿಹಳ್ಳಿಶಿವಣ್ಣ, ಎಚ್.ಹನುಮಂತಪ್ಪ, ಎನ್.ಮಂಜುನಾಥ, ಬಿ.ಟಿ.ರಮೇಶ್‌ಗೌಡ, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಗೀತಾಬಾಯಿ ಮುಂತಾದವರು ಪ್ರಚಾರ ಕಾರ್ಯದಲ್ಲಿ ಭಾಗವಹಿಸಿದ್ದರು.

# ಯುವಕರಿಗೆ ಕೌಶಲ್ಯ ತರಬೇತಿ; ನೌಕರಿ ಖಾತರಿ

**ಭದ್ರಾ ಮೇಲ್ದಂಡೆ ಯೋಜನೆ ರಾಷ್ಟ್ರೀಯ ವ್ಯಾಪ್ತಿಗೆ, ಜಿಲ್ಲೆಯ ಸಮಸ್ಯೆಗಳ ನಿವಾರಣೆಗೆ ಪ್ರಾಮಾಣಿಕ ಯತ್ನ: ಬಿಜೆಪಿ ಅಭ್ಯರ್ಥಿ ಗೋವಿಂದ ಎಂ.ಕಾರಜೋಳ**



» **ಚಳ್ಳಕೆರೆ**

ರಾಷ್ಟ್ರದಲ್ಲಿ ಕಳೆದ ಹತ್ತು ವರ್ಷಗಳಿಂದ ಉತ್ತಮ ಆಡಳಿತದ ಮೂಲಕ ವಿಶ್ವಮನ್ನಣೆ ಗಳಿಸಿದ ಎನ್‌ಡಿಎ ನೇತೃತ್ವದ ನರೇಂದ್ರಮೋದಿಯವರ ಸರ್ಕಾರ ಸರ್ವತೋಮುಖ ಅಭಿವೃದ್ಧಿಗಾಗಿ ಪ್ರಾಮಾಣಿಕ ಸೇವೆಸಲ್ಲಿಸುತ್ತಾ ಬಂದಿದೆ. ಇಂದು ವಿಶ್ವದ ಪ್ರತಿಯೊಂದು ರಾಷ್ಟ್ರವೂ ಪ್ರಧಾನಮಂತ್ರಿ ನರೇಂದ್ರಮೋದಿಯವರನ್ನು ಗೌರವದಿಂದ ಕಾಣುತ್ತಿದೆ. ದೇಶದ ಸುಭದ್ರತೆಗೆ ಹೆಚ್ಚು ಒತ್ತು ನೀಡುವ, ಉಗ್ರಗಾಮಿ ಚಟುವಟಿಕೆಗಳನ್ನು ಸಂಪೂರ್ಣ ನಿಯಂತ್ರಿಸಲು ನರೇಂದ್ರಮೋದಿಯವರು ಮತ್ತೊಮ್ಮೆ ಈ ದೇಶದ ಪ್ರಧಾನಿಯಾಗಬೇಕೆಂಬ ಕನಸು ನನಸಾಗಲು ಏ.26ರಂದು ನಡೆಯುವ ಲೋಕಸಭಾ ಚುನಾವಣೆಗೆ ತಾವೆಲ್ಲರೂ ಜೆಡಿಎಸ್–ಬಿಜೆಪಿ ಮೈತ್ರಿಕೂಟದ ಅಭ್ಯರ್ಥಿ ನನ್ನನ್ನು ಹೆಚ್ಚು ಮತಗಳ ಅಂತರದಿಂದ ಗೆಲುವು ಸಾಧಿಸಲು ಶ್ರಮಿಸಿ ಹಾಗೂ ಜಿಲ್ಲೆಯ ಯುವಕರಿಗೆ ಕೌಶಲ್ಯಾಭಿವೃದ್ಧಿ ತರಬೇತಿ ಮೂಲಕ ಉದ್ಯೋಗ ಅವಕಾಶ ಕಲ್ಪಿಸುವ ಉದ್ದೇಶವಿದ್ದು, ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿಗೆ ನನಗೆ ಮತ ನೀಡಿ ಗೆಲುವು ಸಾಧಿಸಲು ಸಹಕರಿಸಬೇಕೆಂದು ಎಂದು ಅಭ್ಯರ್ಥಿ ಗೋವಿಂದ ಎಂ.ಕಾರಜೋಳ ವಿನಂತಿಸಿದರು. ಅವರು, ಹಿರೇಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿ, ತಳಕು ಹೋಬಳಿ ದೊಡ್ಡ ಉಳ್ಳಾರ್ತಿ ಜಿಲ್ಲಾ ಪಂಚಾಯಿತಿ ಕ್ಷೇತ್ರದ ಘಟಪರ್ತಿ, ಹೊನ್ನೂರು, ದೇವರೆಡ್ಡಿಹಳ್ಳಿ, ಬೇಡರೆಡ್ಡಿಹಳ್ಳಿ, ಹನುಮಂತನಹಳ್ಳಿ ಮುಂತಾದ ಕಡೆಗಳಲ್ಲಿ ಮತಯಾಚನೆ ಮಾಡಿ ಮಾತನಾಡಿದರು.

ಪುಟ ↘ 2




## ಫಾಸ್ಟ್ ನ್ಯೂಸ್

### ಮಹಿಳೆ ಕಾಣೆ

» ಚಿತ್ರದುರ್ಗ



ತಾಲ್ಲೂಕಿನ ಕೆನ್ನೆಡಲು ಗ್ರಾಮದ ವಾಸಿ ಜಯಶೀಲ ಗಂಡ ಮಂಜುನಾಥ (26 ವರ್ಷ) ಎಂಬ ಮಹಿಳೆ ಕಾಣೆಯಾಗಿರುವ ಕುರಿತು 2023 ಅಕ್ಟೋಬರ್ 25 ರಂದು ಚಿತ್ರದುರ್ಗ ನಗರದ ಬಡಾವಣೆ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. 2023ರ ಸೆಪ್ಟೆಂಬರ್ 5ರಂದು ಚಿತ್ರದುರ್ಗ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಹೆಂಗಸು ಕಾಣೆ ಪ್ರಕರಣದಲ್ಲಿ ಪತ್ತೆಯಾಗಿದ್ದ ಜಯಶೀಲ ಗಂಡ ಮಂಜುನಾಥ ಅವರು ತಮ್ಮ ಮನೆಗೆ ಹೋಗಲು ಇಚ್ಛೆ ಇಲ್ಲದೆ ಕಾರಣ ಅವರನ್ನು ಅದೇ ದಿನ ಸಂಜೆ 5 ಗಂಟೆಗೆ ರಾಜಲಕ್ಷ್ಮೀ ಸ್ವಾಧಾರ ಕೇಂದ್ರದಲ್ಲಿ ಬಿಟ್ಟು ಹೋಗಿದ್ದರು. ಸ್ವಾಧಾರ ಕೇಂದ್ರದಲ್ಲಿ ವಾಸವಾಗಿದ್ದ ಜಯಶೀಲ ಅವರು 2023ರ ಅಕ್ಟೋಬರ್ 23ರಂದು ರಾತ್ರಿ 8.40 ಗಂಟೆಯ ಸಮಯದಲ್ಲಿ ಊಟ ಮುಗಿಸಿ, ಹೊರಗಡೆ ಗಾಳಿಗೆ ಹೋಗುತ್ತೇನೆ ಎಂದು ಹೇಳಿ ಹೊರಗಡೆ ಹೋದವರು ವಾಪಸ್ ಬಂದಿರುವುದಿಲ್ಲ. ಕಾಣೆಯಾದ ಮಹಿಳೆಯ ಚಹರೆ ಇಂತಿದೆ. ಜಯಶೀಲ ಗಂಡ ಮಂಜುನಾಥ, 26 ವರ್ಷ, 5.4 ಅಡಿ ಎತ್ತರ, ಕೋಲು ಮುಖ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಮೈಬಣ್ಣ, ಕನ್ನಡ ಭಾಷೆ ಮಾತನಾಡುತ್ತಾರೆ. ಕಾಣೆಯಾದ ಸಂದರ್ಭದಲ್ಲಿ ಸಿಮೆಂಟ್ ಕಲರ್ ಚೂಡಿದಾರ ಟಾಪ್, ಕೆಂಪು ಕಲರ್ ಪ್ಯಾಂಟ್ ಧರಿಸಿರುತ್ತಾಳೆ. ಈ ಮೇಲ್ಕಂಡ ಮಹಿಳೆಯ ಕುರಿತು ಮಾಹಿತಿ ತಿಳಿದುಬಂದಲ್ಲಿ ಚಿತ್ರದುರ್ಗ ನಗರದ ಬಡಾವಣೆ ಪೋಲಿಸ್ ಠಾಣೆಗೆ ಸಂಪರ್ಕಿಸಿ ಮಾಹಿತಿ ನೀಡಬಹುದು ಎಂದು ಚಿತ್ರದುರ್ಗ ಬಡಾವಣೆ ಪೋಲಿಸ್ ಠಾಣೆಯ ಪೋಲಿಸ್ ಉಪ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪಿ.ಯು.ಸಿಯಲ್ಲಿ ಒಂದೇ ಕುಟುಂಬದ ಸಹೋದರರಿಗೆ ಶೇ 95, ಶೇ 93.5 ಫಲಿತಾಂಶ

» ಹೊಸದುರ್ಗ





2023-2 ನೇ ಸಾಲಿನಲ್ಲಿ ನಡೆದ ಪಿಯುಸಿ ಪರೀಕೆಯಲ್ಲಿ ಪಟ್ಟಣದ ಆರ್.ಪಿ ಕಾಲೇಜಿನಲ್ಲಿ ವ್ಯಾಸಂಗ ಮಾಡುತಿದ್ದ ಸಹೋದರರಿಬ್ಬರು ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ್ದಾರೆ.ರವಿಶಂಕರ್ ಎಂ.ವಿ 600ಕ್ಕೆ 570 ಹಾಗೂ ಲೋಹಿತ್ ಎಂ.ಡಿ ಇವರು 600ಕ್ಕೆ 561 ಅಂಕಗಳನ್ನು ಗಳಿಸಿ ಕುಟುಂಬಕ್ಕೂ ಹಾಗೂ ಕಾಲೇಜಿಗೆ ಕೀರ್ತಿ ತಂದಿರುತ್ತಾರೆ. ರವಿಶಂಕರ್ ಎಂ.ವಿ ಮಲ್ಲಾಡಿಹಳ್ಳಿಯ ಶಿಕ್ಷಕರಾದ ಶ್ರೀ ವೀರೇಶ್ ಹಾಗೂ ಶೀಮತಿ ನೇತ್ರಾವತಿಯವರ ಪುತ್ರ ಲೋಹಿತ್ ಎಂ.ಡಿ ದಿ.ದೇವರಾಜ್ ಹಾಗೂ ಶ್ರೀಮತಿ ನಿರ್ಮಲ ರವರ ಪುತ್ರ ಕಾಲೇಜು ಮಂಡಳಿ ಇವರನ್ನು ಅಭಿನಂದಿಸಿದೆ ಲೋಹಿತ್ ಎಂ.ಡಿ ಹಾಗೂ ರವಿಶಂಕರ್ ಎಂ.ವಿ ದಿವಂಗತ ಮಲ್ಲೇಶಪ್ಪ ಎಂ.ವಿ ಹಾಗೂ ಸುಶೀಲಮ್ಮನವರ ಮೊಮ್ಮಕ್ಕಳು.

### ದೇವಸ್ಥಾನದ ಜೀರ್ಣೋದ್ಧಾರಕ್ಕೆ 1 ಲಕ್ಷದ ಡಿ ಡಿ ವಿತರಣೆ



» ಹೊಸದುರ್ಗ

ಶ್ರೀಕ್ಷೇತ್ರ ಧರ್ಮಸ್ಥಳ ಸಂಸ್ಥೆಯ ಹಾಲುರಾಮೇಶ್ವರ ಯೋಜನಾ ಕಚೇರಿ ವ್ಯಾಪ್ತಿಯಿಂದ ತಾಲೂಕಿನ ಅತ್ತಿಮಗ್ಗೆ ಗ್ರಾಮದ ರೇಣುಕಾ ಯಲ್ಲಮ್ಮದೇವಿ ದೇವಸ್ಥಾನದ ಜೀರ್ಣೋದ್ಧಾರಕ್ಕೆ ಕ್ಷೇತ್ರದಿಂದ ಬಂದ 1 ಲಕ್ಷ ರೂಪಾಯಿಯ ಡಿ ಡಿ ಯನ್ನು ವಿತರಿಸಲಾಗಿತು. ಈ ಸಂದರ್ಭದಲ್ಲಿ ಮಾನ್ಯ ಯೋಜನಾಧಿಕಾರಿಯವರಾದ ಚಂದ್ರಶೇಖರ್ ರವರು ಸಮುದಾಯ ಅಭಿವೃದ್ಧಿಯಲ್ಲಿ ಯೋಜನಯ ಪಾತ್ರದ ಬಗ್ಗೆ ತಿಳಿಸಿದರು ಈ ಸಂದರ್ಭದಲ್ಲಿ ದೇವಸ್ಥಾನದ ಕಮಿಟಿ ಅಧ್ಯಕ್ಷರಾದ ತಿಮ್ಮೇಶ್, ರಮೇಶ್ ಹಾಗೂ ಒಕ್ಕೂಟದ ಪದಾಧಿಕಾರಿಗಳು ಜ್ಯೋತಿ ಊರಿನ ಗಣ್ಯರು. ಮೇಲ್ವಿಚಾರಕರಾದ ರಮೇಶ್ . ಸೇವಾ ಪ್ರತಿನಿಧಿ ಸುಧಾ ಉಪಸ್ಥಿತರಿದ್ದರು

### ಪಿಯುಸಿಯಲ್ಲಿ ಚಮನ್ ಬೀ ಶೇ.89ರಷ್ಟು ಫಲಿತಾಂಶ

» ದಾವಣಗೆರೆ

ಇಲ್ಲಿನ ಎ.ವಿ.ಕಮಲಮ್ಮ ಮಹಿಳಾ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿ, ಶ್ರೀ ಶೌಕತ್ ಅಲಿ, ಶ್ರೀಮತಿ ಖುರ್ಷಿದಾ ಬಾನು ಇವರ ಪುತ್ರಿ ಚಮನ್ ಬೀ ಇವರು ಪಿಯುಸಿ ವಾಣಿಜ್ಯ ವಿಭಾಗದ ಪರೀಕ್ಷೆಯಲ್ಲಿ 600ಕ್ಕೆ 535 ಅಂಕಗಳನ್ನು ಪಡೆದು ಉತ್ತೀರ್ಣರಾಗಿದ್ದಾರೆ.

# ಗೋವಿಂದ ಕಾರಜೋಳ ಬುದ್ಧಿವಂತನಾಗಿದ್ದರೆ ಇಲ್ಲಿಗೆ ಬಂದು ಸ್ಪರ್ಧಿಸುತ್ತಿರಲಿಲ್ಲ: ಕೆಎಚ್‌ಎಂ

» ಚಿತ್ರದುರ್ಗ



ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳ ಬುದ್ದಿವಂತನಾಗಿದ್ದರೆ ಇಲ್ಲಿಗೆ ಬಂದು ಸ್ಪರ್ಧಿಸುತ್ತಿರಲಿಲ್ಲ. ನಾವು ಗೆಲ್ಲುವ ಕಡೆ ಏಕೆ ಬಂದು ತೊಂದರೆ ಕೊಡುತ್ತೀಯ ಎಂದು ಗುಪ್ತವಾಗಿ ಹೇಳಿದ್ದೆ. ಕೇಳಲಿಲ್ಲ ಎಂದು ಆಹಾರ ಮತ್ತು ನಾಗರೀಕ ಪೂರೈಕೆ ಸಚಿವ ಕೆ.ಹೆಚ್.ಮುನಿಯಪ್ಪ ತಮ್ಮ ವೇದನೆಯನ್ನು ಹೊರ ಹಾಕಿದರು.

ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್. ಚಂದ್ರಪ್ಪನವರನ್ನು ಬೆಂಬಲಿಸಿ ಎನ್.ಬಿ.ಟಿ.ಹಾಲ್‌ನಲ್ಲಿ ಶುಕ್ರವಾರ ನಡೆದ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಮಾದಿಗ ಸಮುದಾಯದ ಮುಖಂಡರ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.

ಗೋವಿಂದ ಕಾರಜೋಳರವರು ನಮ್ಮವರೆ ಮಾದಿಗ ಸಮುದಾಯದವರು. ಆದರೂ ತಪ್ಪುಹೆಜ್ಜೆ ಇಟ್ಟಿದ್ದಾರೆ. ರಾಜ್ಯದ 28 ಕ್ಷೇತ್ರಗಳಲ್ಲಿ ಬೇರೆ ಎಲ್ಲಿಯಾದರೂ ಹೋಗಿ ಸ್ಪರ್ಧಿಸಬಹುದಿತ್ತು. ಧರ್ಮ ಅಧರ್ಮದ ನಡುವೆ ನಡೆಯುತ್ತಿರುವ ಈ ಚುನಾವಣೆಯಲ್ಲಿ ಧರ್ಮದ ಪರವಾಗಿರುವ ಸರಳ ಸಂಪನ್ನ ಬಿ.ಎನ್. ಚಂದ್ರಪ್ಪನವರನ್ನು ಗೆಲ್ಲಿಸುವಂತೆ ಮಾದಿಗ ಸಮುದಾಯದವರಲ್ಲಿ ಕೆ.ಹೆಚ್. ಮುನಿಯಪ್ಪ ಮನವಿ ಮಾಡಿದರು.

ರಾಜ್ಯದಲ್ಲಿ ಕೋಲಾರ ಮತ್ತು ಚಿತ್ರದುರ್ಗ ಎರಡು ಕಡೆ ಸೀಟು ತರಬೇಕಾದರೆ ಸಾಕಷ್ಟು ಹೋರಾಟ ನಡೆಸಬೇಕಾಯಿತು. ಸೀಟು ತಪ್ಪಿಸುವ ಹುನ್ನಾರವು ನಡೆಯಿತು. ಎಲ್ಲವನ್ನು ಮೀರಿ ದೊಡ್ಡ ಸಂಖ್ಯೆಯ ಜನಾಂಗಕ್ಕೆ ಅನ್ಯಾಯ ಮಾಡಬಾರದೆಂದು ಎ.ಐ.ಸಿ.ಸಿ. ಅಧಿನಾಯಕಿ ಸೋನಿಯಾಗಾಂಧಿ ಹಾಗೂ ಮಲ್ಲಿಕಾರ್ಜುನ ಖರ್ಗೆರವರು ಮಾದಿಗ ಸಮುದಾಯಕ್ಕೆ ಟಿಕೇಟ್ ನೀಡಿ ಸ್ಪರ್ಧಿಸಲು ಅವಕಾಶ ನೀಡಿದ್ದಾರೆ. ಚಿತ್ರದುರ್ಗ ಹಾಗೂ ಕೋಲಾರ ಎರಡು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆದ್ದರೆ ಶೋಷಿತರು, ಅಲ್ಪಸಂಖ್ಯಾತರು, ದಲಿತರು ಶಾಂತವಾಗಿರಬಹುದು. ಕೋಮು ಗಲಭೆಗಳು ನಡೆಯುವುದಿಲ್ಲ. ಕೇವಲ ಮಾದಿಗರಷ್ಟೆ ಅಲ್ಲ ಎಲ್ಲಾ ಜಾತಿಯವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪನವರನ್ನು ಗೆಲ್ಲಿಸುವಂತೆ ವಿನಂತಿಸಿದರು.

ಬುದ್ದ, ಬಸವ, ಅಂಬೇಡ್ಕರ್, ಗಾಂಧಿ ಚಿಂತನೆಯುಳ್ಳ ಕಾಂಗ್ರೆಸ್ ಪಕ್ಷ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದರೆ ಸಂವಿಧಾನ ಉಳಿಯುತ್ತದೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇವರುಗಳು ಐದು ಉಚಿತ ಗ್ಯಾರೆಂಟಿಗಳನ್ನು ನೀಡಿದ್ದಾರೆ. ಎಲ್ಲಾ ವರ್ಗದವರನ್ನು ಹಸಿವುಮುಕ್ತವನ್ನಾಗಿಸಿ ಆಹಾರ ಭದ್ರತೆ ಕಾಯಿದೆ ಜಾರಿಗೆ ತಂದಿದ್ದು, ನಮ್ಮ ಪಕ್ಷ. ಒಂದು ಕೋಟಿ ಇಪ್ಪತ್ತೆಂಟು ಲಕ್ಷ ಕುಟುಂಬಗಳಿಗೆ ನಾಲ್ಕುವರೆ ಕೋಟಿ ಜನಕ್ಕೆ ನೂರ ಎಪ್ಪತ್ತು ರೂ.ಗಳು ಸಿಕ್ಕಿದೆ. ಗೃಹಲಕ್ಷ್ಮಿ, ಅನ್ನಭಾಗ್ಯ, ಯುವನಿಧಿ, ಶಕ್ತಿ ಯೋಜನೆ ಈ ಬಾರಿಯ ಚುನಾವಣೆಯಲ್ಲಿ ಪಕ್ಷಕ್ಕೆ ವರದಾನವಾಗಲಿದೆ. ಕಾಂಗ್ರೆಸ್ ಕಾರ್ಯಕ್ರಮಗಳನ್ನು ಪ್ರತಿ ಮನೆ ಮನೆಗೆ ಮುಟ್ಟಿಸಿ ಅಭ್ಯರ್ಥಿ ಬಿ.ಎನ್. ಚಂದ್ರಪ್ಪನವರನ್ನು ಬಹುಮತಗಳಿಂದ ಗೆಲ್ಲಿಸುವಂತೆ ಕೆ.ಹೆಚ್.ಮುನಿಯಪ್ಪ ಮಾದಿಗ ಸಮುದಾಯದವರಲ್ಲಿ ಕೋರಿದರು.

ಮಾಜಿ ಸಚಿವ ಹೆಚ್.ಆಂಜನೇಯ ಮಾತನಾಡಿ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ವರಿಷ್ಟರು ಕೋಲಾರ ಹಾಗೂ ಚಿತ್ರದುರ್ಗ ಮೀಸಲು ಕ್ಷೇತ್ರಗಳಲ್ಲಿ ಮಾದಿಗರಿಗೆ ಟಿಕೇಟ್ ನೀಡಿ ಸ್ಪರ್ಧೆಗೆ ಅವಕಾಶ ಮಾಡಿಕೊಟ್ಟಿದ್ದಾರೆ. ನನಗೂ ಸ್ಪರ್ಧಿಸುವಂತೆ ಕೇಳಿದರು. ರಾಷ್ಟ್ರ ರಾಜಕಾರಣ ಇಷ್ಟವಿಲ್ಲದ ಕಾರಣ ಬಿ.ಎನ್. ಚಂದ್ರಪ್ಪನವರನ್ನೆ ಸ್ಪರ್ಧಿಸುವಂತೆ ಹೇಳಿದೆ. ಅನೇಕ ಆಕಾಂಕ್ಷಿಗಳಿದ್ದರೂ ಬಿ.ಎನ್. ಚಂದ್ರಪ್ಪನವರನ್ನು ಅಭ್ಯರ್ಥಿಯನ್ನಾಗಿ ಪಕ್ಷ ಘೋಷಿಸಿದೆ. ಮಾದಿಗ ಸಮುದಾಯ ಒಗ್ಗಟ್ಟಾಗಿ ಗೆಲ್ಲಿಸಿ ರಾಜಕೀಯವಾಗಿ ಶಕ್ತಿ ತುಂಬುವ ಕೆಲಸ ಮಾಡಬೇಕೆಂದು ಮಾದಿಗ ಜನಾಂಗದವರನ್ನು ತಾಕೀತು ಮಾಡಿದರು. ಕೋಮುವಾದಿ ಬಿಜೆಪಿ. ನಮ್ಮವರಿಗೆ ಒಬ್ಬರಿಗೂ ಅವಕಾಶ ಕೊಟ್ಟಿಲ್ಲ. ಮಾದಿಗರು, ಅಹಿಂದ ವರ್ಗದವರು ಒಂದಾಗಿ ಮತ ಚಲಾಯಿಸಿದ್ದರಿಂದ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಲು ಕಾರಣವಾಯಿತು. ಯಾವುದೇ ಒಬ್ಬ ನಾಯಕ ಎಲ್ಲರೂ ಮೆಚ್ಚುವಂತಿರಬೇಕು. ಸರಳ, ಸಂಪನ್ನ ಬಿ.ಎನ್.ಚಂದ್ರಪ್ಪನವರನ್ನು ಗೆಲ್ಲಿಸುವ ಜವಾಬ್ದಾರಿ ಎಲ್ಲರ ಮೇಲಿದೆ. ನಾನು ಸಮಾಜ ಕಲ್ಯಾಣ ಸಚಿವನಾಗಿದ್ದಾಗ ಎಸ್.ಸಿ.ಪಿ. ಟಿ.ಎಸ್.ಪಿ. ಕಾಯಿದೆಯನ್ನು ಜಾರಿಗೊಳಿಸಿದೆ. 36 ಸಾವಿರ ಕೋಟಿ ರೂ.ಗಳಿದೆ. ಆದಿಜಾಂಬವ ನಮ್ಮ ಸಮುದಾಯಕ್ಕೆ ಬಳಕೆಯಾಗಬೇಕು. ಬೇರೆ ಕಾಮಗಾರಿಗೆ ಬಳಸಬಾರದು. ದುರ್ಬಲ ಮಾದಿಗ ಸಮಾಜ ರಾಜಕೀಯ, ಶೈಕ್ಷಣಿಕ, ಸಾಮಾಜಿಕ, ಆರ್ಥಿಕವಾಗಿ ಮುಖ್ಯವಾಹಿನಿಗೆ ಬರಬೇಕಾಗಿರುವುದರಿಂದ ಮಾದಿಗ ಜನಾಂಗ ಈ ಚುನಾವಣೆಯನ್ನು ಗಂಭೀರವಾಗಿ ತೆಗೆದುಕೊಳ್ಳುವಂತೆ ತಿಳಿಸಿದರು.

ಮಾದಿಗ ಸಮಾಜದ ಮುಖಂಡ ಜಿ.ಎಸ್.ಮಂಜುನಾಥ್ ಮಾತನಾಡುತ್ತ ಮಾದಿಗ ಸಮುದಾಯದಲ್ಲೆ ನಾಯಕತ್ವವನ್ನು ಕುಂದಿಸುವಂತ ಕೆಲಸವಾಗುತ್ತಿರುವುದರಿಂದ ಹೆಚ್. ಆಂಜನೇಯ ಹೊಳಲ್ಕೆರೆ ವಿಧಾನಸಭಾ ಕ್ಷೇತ್ರದಿಂದ ಸೋಲಬೇಕಾಯಿತು. ಸಣ್ಣ ಸಣ್ಣ ಮನಸ್ತಾಪಗಳನ್ನು ಬಿಟ್ಟು ಎಲ್ಲರೂ ಒಂದಾಗಿ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಚಿತ್ರದುರ್ಗ ಕ್ಷೇತ್ರದಿಂದ ಸ್ಪರ್ಧಿಸಿರುವ ಬಿ.ಎನ್.ಚಂದ್ರಪ್ಪನವರನ್ನು ಗೆಲ್ಲಿಸಬೇಕಿದೆ ಎಂದು ಹೇಳಿದರು.

ಸಂವಿಧಾನ ಬದಲಾವಣೆ ಮಾಡಲು ಹೊರಟಿರುವ ಬಿಜೆಪಿ.ಯಲ್ಲಿಯೂ ಮಾದಿಗ ಸಮುದಾಯದ ಶಾಸಕರು, ಮಂತ್ರಿಗಳಿದ್ದಾರೆ. ನಮ್ಮ ಸಮುದಾಯಕ್ಕೆ ನಿಜವಾಗಿಯೂ ನಾಚಿಕೆಯಾಗಬೇಕು. ಯಾರೆ ಅಭ್ಯರ್ಥಿಗಳಾಗಿ ಇಲ್ಲಿಗೆ ಬರಲಿ ಅವರ ಹಿಂದೆ ಮಾದಿಗ ಜನಾಂಗ ಹೋಗುತ್ತಿದೆ. ಪ್ರಜಾಪ್ರಭುತ್ವ ಸಂವಿಧಾನ ಉಳಿಯಬೇಕಾಗಿದೆ. ನಮ್ಮ ಮಕ್ಕಳ ಮುಂದಿನ ಭವಿಷ್ಯದ ದೃಷ್ಟಿಯಿಂದ ಕಾಂಗ್ರೆಸ್ ಕೇಂದ್ರದಲ್ಲಿ ಅಧಿಕಾರಕ್ಕೆ ಬರಲೇಬೇಕು. ಜಾತ್ಯತೀತ ಪಕ್ಷ ಜೆಡಿಎಸ್. ಬಿಜೆಪಿ. ಜೊತೆ ಹೊಂದಾಣಿಕೆ ಮಾಡಿಕೊಂಡಿದೆ. ಮಾದಿಗರೆಲ್ಲಾ ಒಂದಾಗಿ ಬಿಜೆಪಿ.ಯನ್ನು ಮಣಿಸಬೇಕು. ರಾಜ್ಯದಲ್ಲಿ ಅರವತ್ತರಿಂದ ಎಪ್ಪತ್ತು ಲಕ್ಷ ಮಾದಿಗರಿದ್ದೇವೆ. ಡಿ.ಸುಧಾರಕರ್‌ರವರನ್ನು ಮಾದಿಗರು ಮಂತ್ರಿಯನ್ನಾಗಿ ಮಾಡಿದ್ದಾರೆ. ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ಮಾದಿಗ ಮತದಾರರಿದ್ದಾರೆ. ಮನುವಾದಿಗಳ ಕೈಗೆ ಅಧಿಕಾರ ಕೊಡಬಾರದೆಂದರೆ ಕಾಂಗ್ರೆಸ್‌ನ ಬಿ.ಎನ್.ಚಂದ್ರಪ್ಪನವರನ್ನು ಗೆಲ್ಲಿಸಬೇಕಿದೆ ಎಂದು ವಿನಂತಿಸಿದರು.

ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಮಾತನಾಡುತ್ತ ಸಂವಿಧಾನ ಉಳಿಸುವ ಚುನಾವಣೆ ಇದಾಗಿರುವುದರಿಂದ ಮಾದಿಗ ಸಮುದಾಯ ಎಚ್ಚರಿಕೆಯಿಂದ ಮತ ಚಲಾಯಿಸಬೇಕಿದೆ. ಮನುವಾದಿಗಳು, ಭೀಮವಾದಿಗಳ ನಡುವಿನ ಚುನಾವಣೆಯಲ್ಲಿ ಗೆಲುವು ನಮ್ಮದಾಗಬೇಕು. ಮುದೋಳ, ಬಾಗಲಕೋಟೆಯಲ್ಲಿ ಸಾಕಷ್ಟು ಅಭಿವೃದ್ದಿ ಮಾಡಿದ್ದೇನೆಂದು ಹೇಳಿಕೊಳ್ಳುತ್ತಿರುವ ಗೋವಿಂದ ಕಾರಜೋಳ ಏಕೆ ಸೋತರು ಎಂದು ಪ್ರಶ್ನಿಸಿದ ಬಿ.ಎನ್.ಚಂದ್ರಪ್ಪ ಬಿಜೆಪಿ.ಯ ಪೊಳ್ಳು ಭರವಸೆಗಳು ಇಲ್ಲಿ ನಡೆಯಲ್ಲ. ಬಹುಮತಗಳಿಂದ ಗೆಲ್ಲಿಸಿ ನನ್ನನ್ನು ಪಾರ್ಲಿಮೆಂಟ್‌ಗೆ ಕಳಿಸಿಕೊಡಿ ಎಂದು ಮಾದಿಗ ಸಮುದಾಯದವರಲ್ಲಿ ಕೇಳಿಕೊಂಡರು.

ಲಿಡ್ಕರ್ ಮಾಜಿ ಚೇರ್ಮನ್ ಓ.ಶಂಕರ್ ಇನ್ನು ಅನೇಕರು ಮಾತನಾಡಿದರು.

ಮಾದಿಗ ಸಮಾಜದ ಮುಖಂಡರುಗಳಾದ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಗೋಪಾಲಕೃಷ್ಣ, ಆರ್.ನರಸಿಂಹರಾಜ, ಡಿ.ಎನ್.ಮೈಲಾರಪ್ಪ, ಜಿ.ಎಲ್.ಮೂರ್ತಿ, ಪಾಂಡುರಂಗಸ್ವಾಮಿ, ವೀರಭದ್ರಪ್ಪ, ರಂಗ್ವಾಮಿ, ಮಲ್ಲೇಶಪ್ಪ, ತಿಪ್ಪಮ್ಮ, ಗೀತಮ್ಮ, ಸುಜಾತಮ್ಮ, ಎಂ.ಡಿ.ರವಿ, ಬಿ.ಪಿ.ತಿಪ್ಪೇಸ್ವಾಮಿ, ಹರೀಶ್, ಕೊಟ್ಟ ಶಂಕರ್, ಜಯಣ್ಣ, ಕೆ.ಕುಮಾರ್, ಬಿ.ಪಿ.ಪ್ರಕಾಶ್ ಮೂರ್ತಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಇನ್ನು ಅನೇಕರು ವೇದಿಕೆಯಲ್ಲಿದ್ದರು.

ಮಾದಿಗ ಸಮಾಜದ ಎಸ್.ಜಗದೀಶ್, ಕೆ.ರಾಜಣ್ಣ, ಮಲ್ಲೇಶ್ ಇನ್ನು ಮುಂತಾದವರು ಸಭೆಯಲ್ಲಿ ಭಾಗವಹಿಸಿದ್ದರು.

## ಮನೆಯಿಂದ ಮತದಾನ: ಅಧಿಕಾರಿಗಳಿಗೆ ತರಬೇತಿ



» ಚಿತ್ರದುರ್ಗ

ನಗರಸಭೆ ಕೌನ್ಸಿಲ್ ಸಭಾಂಗಣದಲ್ಲಿ ಶುಕ್ರವಾರ ಮನೆಯಿಂದ ಮತದಾನಕ್ಕೆ ತೆರಳುವ ಅಧಿಕಾರಿಗಳಿಗೆ ತರಬೇತಿ ನೀಡಲಾಯಿತು. ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನಲೆಯಲ್ಲಿ ಚಿತ್ರದುರ್ಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಇದೇ ಏಪ್ರಿಲ್ 13 ರಿಂದ 15 ರವರೆಗೆ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಹಾಗೂ ಅಂಗವಿಕಲ ಮತದಾರರಿಗೆ ಮನೆಯಲ್ಲಿಯೇ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿದ್ದು, ಮನೆ ಮತದಾನಕ್ಕೆ ತೆರಳುವ ಅಧಿಕಾರಿಗಳಿಗೆ ತರಬೇತಿ ನೀಡಲಾಯಿತು. ತರಬೇತಿಯಲ್ಲಿ ಚಿತ್ರದುರ್ಗ ವಿಧಾನಸಭಾ ಕ್ಷೇತ್ರ ಸಹಾಯಕ ಚುನಾವಣಾಧಿಕಾರಿ ಹಾಗೂ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ತಹಶೀಲ್ದಾರ್ ಡಾ.ನಾಗವೇಣಿ, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ಸೇರಿದಂತೆ ಮತ್ತಿತರರು ಇದ್ದರು.




## ನಗರಸಭೆ, ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ವಿವಿದೆಡೆ ದಾಳಿ : ನಿಷೇಧಿತ ಪ್ಲಾಸ್ಟಿಕ್‌ಗಳ ವಶ.



» ಚಿತ್ರದುರ್ಗ

ನಗರಸಭೆ ಹಾಗೂ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು ನಗರದ ಕೆಲವೆಡೆ ದಾಳಿ ನಡೆಸಿ ನಿಷೇಧಿ ಪ್ಲಾಸ್ಟಿಕ್‌ಗಳನ್ನು ವಶಪಡಿಸಿಕೊಂಡು ಅಂಗಡಿ ಮಾಲೀಕರುಗಳಿಗೆ ದಂಡ ವಿಧಿಸಿದ್ದಾರೆ.

ಬೀದಿ ಬದಿ ವ್ಯಾಪಾರಿಗಳು, ದಾವಣಗೆರೆ ರಸ್ತೆಯಲ್ಲಿರುವ ಅಂಗಡಿ ಮುಂಗಟ್ಟುಗಳು ಹಾಗೂ ಸರ್ಕಾರಿ ಬಸ್‌ನಿಲ್ದಾಣದಲ್ಲಿ ಮಾರಾಟ ಮಾಡುತ್ತಿದ್ದ ನಿಷೇಧಿತ ಪ್ಲಾಸ್ಟಿಕ್‌ಗಳನ್ನು ವಶಪಡಿಸಿಕೊಂಡಿರುವ ಅಧಿಕಾರಿಗಳು ಇನ್ನು ಮುಂದೆ ಮಾರಾಟ ಮಾಡಿದರೆ ಅಂಗಡಿಯ ಲೈಸೆನ್ಸ್ ರದ್ದುಪಡಿಸುವುದಾಗಿ ಎಚ್ಚರಿಕೆ ನೀಡಿದ್ದಾರೆ. ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿ ಈ.ಪ್ರಕಾಶ್, ಪರಿಸರ ಅಧಿಕಾರಿ ರಾಜೇಶ್ ಪಿ. ನಗರಸಭೆ ಪರಿಸರ ಇಂಜಿನಿಯರ್ ಜಾಫರ್, ಆರೋಗ್ಯ ನಿರೀಕ್ಷಕಿ ಭಾರತಿ, ಸ್ಯಾನಿಟರಿ ಸೂಪರ್‌ವೈಸರ್ ಮಂಜುನಾಥ, ಚಂದ್ರು, ಪೌರ ಕಾರ್ಮಿಕ ನಾಗರಾಜ್ ಧಾಳಿಯಲ್ಲಿ ಪಾಲ್ಗೊಂಡಿದ್ದರು.

ಪ್ರಮುಖ ಸುದ್ದಿ

# ಯುವಕರಿಗೆ ಕೌಶಲ್ಯ ತರಬೇತಿ; ನೌಕರಿ ಖಾತರಿ

» ಮೊದಲ ಪುಟದಿಂದ



ಇದಕ್ಕೂ ಮುನ್ನ ತಳಕು ಗ್ರಾಮಕ್ಕೆ ಭೇಟಿ ನೀಡಿದ ಅಭ್ಯರ್ಥಿ ಎಂ.ಗೋವಿಂದ ಕಾರಜೋಳ ತರಾಸು ಭಾವಚಿತ್ರಕ್ಕೆ ನಮನಸಲ್ಲಿಸಿ, ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದರು. ರಾಜ್ಯದ ಹಿಂದುಳಿದ ಜಿಲ್ಲೆಗಳಲ್ಲಿ ಒಂದಾದ ಚಿತ್ರದುರ್ಗ ಜಿಲ್ಲೆ ಕಳೆದ ಹಲವಾರು ದಶಕಗಳಿಂದ ನೀರಾವರಿ ಸೌಲಭ್ಯಗಳನ್ನು ಕಾಣದೆ ವಂಚಿತವಾಗಿದೆ. ಭದ್ರಾಮೇಲ್ದಂಡೆ ಯೋಜನೆ ಜಾರಿಯಾಗಬೇಕೆಂಬ ಲಕ್ಷಾಂತರ ರೈತರ ಕನಸನ್ನು ನನಸು ಮಾಡುವತ್ತ ಪ್ರಧಾನಮಂತ್ರಿ ನರೇಂದ್ರಮೋದಿ ದಿಟ್ಟ ಹೆಜ್ಜೆ ಇಟ್ಟಿದ್ದಾರೆ. ಈ ಹಿಂದೆ ಈ ರಾಜ್ಯದ ಮುಖ್ಯಮಂತ್ರಿಯಾಗಿದ್ದ ರೈತ ನಾಯಕ ಬಿ.ಎಸ್.ಯಡಿಯೂರಪ್ಪ 2500 ಕೋಟಿ ಹಣ ಮಂಜೂರು ಮಾಡಿ 2007ರಲ್ಲೇ ಈ ಯೋಜನೆಗೆ ಚಾಲನೆ ನೀಡಿದರು. ಚಿತ್ರದುರ್ಗ ಜಿಲ್ಲೆಯ ರೈತರ ಕನಸನ್ನು ನನಸು ಮಾಡಲು ಯಡಿಯೂರಪ್ಪ ಭದ್ರಾ ಮೇಲ್ದಂಡೆ ಯೋಜನೆ ಜಾರಿ ಮಾಡುವ ಮೂಲಕ ನೆರವಾದರು. ಅದೇ ರೀತಿ ಪ್ರಧಾನಮಂತ್ರಿ ನರೇಂದ್ರಮೋದಿ ಭದ್ರಾ ಮೇಲ್ದಂಡೆ ಯೋಜನೆಗೆ ಅವಶ್ಯವಿರುವ ಸುಮಾರು 12.50 ಕೋಟಿ ಹಣವನ್ನು ನೀಡುವ ಉದ್ದೇಶದಿಂದ ಈ ಯೋಜನೆಯನ್ನು ರಾಷ್ಟ್ರೀಯ ಯೋಜನೆ ವ್ಯಾಪ್ತಿಯಗೆ ಸೇರ್ಪಡೆಯಾಗಿದೆ. ಮುಂದಿನ ದಿನಗಳಲ್ಲಿ ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ, ಮೊಳಕಾಲ್ಮೂರು ತಾಲ್ಲೂಕು ಸೇರಿದಂತೆ ಎಲ್ಲೆಡೆ ನೀರಿನ ಭಾಗ್ಯ ಉಂಟಾಗಲಿದೆ. ಇಂತಹ ಸುಧಿನ ಈ ಭಾಗದ ರೈತರಿಗೆ ಶೀಘ್ರದಲ್ಲೇ ಲಭಿಸಲಿ ಎಂದು ಪ್ರಾರ್ಥಿಸುತ್ತೇನೆ. ತಾವೆಲ್ಲರೂ ಮತ್ತೊಮ್ಮೆ ಕೇಂದ್ರದಲ್ಲಿ ನರೇಂದ್ರಮೋದಿಯವರಿಗೆ ಶಕ್ತಿ ತುಂಬಲು ಬಿಜೆಪಿ ಗುರುತಾದ ಕಮಲಕ್ಕೆ ಮತ ನೀಡಬೇಕು ಎಂದರು.

ಕರ್ನಾಟಕ ರಾಜ್ಯದ ಮಾಜಿ ಉಪಮುಖ್ಯಮಂತ್ರಿಯಾಗಿ ಸೇವೆ ಸಲ್ಲಿಸಿದ್ದು, ಎಲ್ಲಾ ಜಿಲ್ಲೆಯ ಮಾಹಿತಿ ಇದೆ. ನಾನು ಈ ಹಿಂದೆ ಸಣ್ಣ ನೀರಾವರಿ ಸಚಿವನಾದಾಗ ಚಳ್ಳಕೆರೆ ತಾಲ್ಲೂಕಿನ ಎರಡ್ಮೂರು ಬ್ಯಾರೇಜ್ ನಿರ್ಮಾಣಕ್ಕೆ ಮಂಜೂರಾತಿ ನೀಡಿದ್ದೆ. ಚಿತ್ರದುರ್ಗ ಜಿಲ್ಲೆ ನನಗೆ ಹೊಸದಲ್ಲ, ಈ ಜಿಲ್ಲೆಯ ಬಗ್ಗೆ ಅಪರಾವರಾದ ಕಾಳಜಿ ಇದೆ, ತಾವು ಅಪಪ್ರಚಾರವನ್ನು ನಂಬದೆ ಮೋದಿಯವರನ್ನು ಮತ್ತೊಮ್ಮೆ ಪ್ರಧಾನಮಂತ್ರಿಯಾಗಲು ಬಿಜೆಪಿಗೆ ಶಕ್ತಿ ತುಂಬಬೇಕು ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ಮಾಜಿ ಶಾಸಕ ಎಸ್.ತಿಪ್ಪೇಸ್ವಾಮಿ, ಜೆಡಿಎಸ್, ಬಿಜೆಪಿ ಮೈತ್ರಿಕೂಟದ ಅಭ್ಯರ್ಥಿ ಗೋವಿಂದ ಎಂ.ಕಾರಜೋಳ ನಮ್ಮ ರಾಜ್ಯದ ಹಿರಿಯ ರಾಜಕಾರಣಿ. ಎರಡ್ಮೂರು ಬಾರಿ ಸಚಿವರಾದರೂ ಪ್ರಾಮಾಣಿಕತೆಯಿಂದ ಎಲ್ಲರ ವಿಶ್ವಾಸ ಗಳಿಸಿದ್ದಾರೆ. ಚಿತ್ರದುರ್ಗ ಲೋಕಸಭಾ ಕ್ಷೇತ್ರಕ್ಕೆ ಅಭ್ಯರ್ಥಿಯಾಗಬೇಕೆಂಬ ಪಕ್ಷ, ಮುಖಂಡರ, ಕಾರ್ಯಕರ್ತರ ವಿಶ್ವಾಸಕ್ಕೆ ಗೌರವ ನೀಡಿ ಅಭ್ಯರ್ಥಿಯಾಗಿದ್ದಾರೆ. ಚುನಾವಣೆಯಲ್ಲಿ ಅವರನ್ನು ಜಯಶೀಲರನ್ನಾಗಿ ಮಾಡುವ ಜವಾಬ್ದಾರಿ ನಮ್ಮೆಲ್ಲರ ಮುಖಂಡರು ಮತ್ತು ಕಾರ್ಯಕರ್ತರ ಮೇಲಿದೆ. ಜೆಡಿಎಸ್ ಬಿಜೆಪಿ ಪಕ್ಷದ ಕಾರ್ಯಕರ್ತರು ಇನ್ನೂ 15 ದಿನಗಳ ಕಾಲ ಮನೆಸೇರದೆ ಗೋವಿಂದಕಾರಜೋಳರವರ ಗೆಲುವಿಗೆ ಶ್ರಮಿಸಬೇಕು ಎಂದರು. ಜಿಲ್ಲಾ ಬಿಜೆಪಿ ಅಭ್ಯರ್ಥಿ ಎ.ಮುರುಳಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಳೆಮಂಡಿರಾಮದಾಸ್, ಜೆಡಿಎಸ್ ಮುಖಂಡ, ಮೊಳಕಾಲ್ಮೂರು ಕ್ಷೇತ್ರದ ಪರಾಜಿತ ಅಭ್ಯರ್ಥಿ ವೀರಭದ್ರಪ್ಪ(ಭದ್ರಿ), ನಿವೃತ್ತ ಐಎಎಸ್ ಅಧಿಕಾರಿ ಲಕ್ಷ್ಮಿನಾರಾಯಣ, ಮಂಡಲಾಧ್ಯಕ್ಷ ಈ.ರಾಮರೆಡ್ಡಿ, ಪ್ರಧಾನಕಾರ್ಯದರ್ಶಿ ಚನ್ನಗಾನಹಳ್ಳಿಮಲ್ಲೇಶ್, ಜಿಲ್ಲಾಪಂಚಾಯಿತಿ ಮಾಜಿ ಸದಸ್ಯರಾದ ಎನ್.ಓಬಳೇಶ್, ಜಯಪಾಲಯ್ಯ, ಮುಖಂಡರಾದ ಕುಪೇಂದ್ರರೆಡ್ಡಿ, ಕಾಲುವೇಹಳ್ಳಿಶ್ರೀನಿವಾಸ್, ರಂಗಸ್ವಾಮಿ, ಬಾಬು, ವೆಂಕಟಪ್ಪ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಮತಾದಾನ ಮಾಡುವುದರಿಂದ ನಮ್ಮ ಪ್ರಭುದ್ದತೆ ಬೆಳೆಯುತ್ತದೆ

» **ಹೊಸದುರ್ಗ**

ಮತಾದಾನ ಮಾಡುವುದರಿಂದ ನಮ್ಮ ಪ್ರಭುದ್ದತೆ ಬೆಳೆಯುತ್ತದೆ ತಾಲೂಕ್ ಸ್ವೀಪ್ ಸಮಿತಿ ಅದ್ಯಕ್ಷ ಹಾಗೂ ತಾಪಂ ಇಓ ಬಿ. ಸುನೀಲ್ ಎಂದು ಹೇಳಿದರು. ಪಟ್ಟಣದಲ್ಲಿ ಮತದಾನ ಜಾಗೃತಿ ಅಂಗವಾಗಿ ತಾಲೂಕ್ ಸ್ವೀಪ್ ಸಮಿತಿ ಅಯೋಜಿಸಿದ್ದ ಬೈಕ್ ರ್‍ಯಾಲಿಗೆ ತಾಪಂ ಇಓ ಬಿ. ಸುನೀಲ್ ಚಾಲನೆ ನೀಡಿದರು.ಮತದನ ಹಕ್ಕು ಪಡೆದ ಪ್ರತಿಯೊಬ್ಬರು ನಮ್ಮ ಪ್ರತಿನಿಧಿಯನ್ನು ಅಯ್ಕೆ ಮಾಡುವುದರಿಂದ ವಿಶ್ವದಲ್ಲಿಯೆ ಭಾರತದ ಪ್ರಜಾಪ್ರಭುತ್ವ ಅಡಳಿತ ವ್ಯವಸ್ಥೆ ಮಾದರಿಯಾಗುತ್ತದೆ ಎಂದು ಹೇಳಿದರು. ಬಿಇಓ ಸಯಿದ್ ಮೋಸಿನ್ ಮಾತನಾಡಿ ಮತದಾನ ಮಾಡುವುದು ದೇಶದ ಅಭಿವೃದ್ಧಿಗೆ ನೀಡುವ ದೊಡ್ಡ ಕೊಡುಗೆ ನೀಡಿದಂತೆ ಎಂದು ಹೇಳಿದರು. ತಾಲೂಕಿನ ನಾನಾ ಇಲಾಖೆಯ ಅಧಿಕಾರಿಗಳು ನೌಕರರು ಹಾಗೂ ಸಿಬ್ಬಂದಿಗಳು ಪಟ್ಟಣದ ಮುಖ್ಯ ರಸ್ತೆಯಲ್ಲಿ ಮತಾದಾನದ ಬಗ್ಗೆ ಅರಿವು ಮೂಡಿಸುವ ಬಿತ್ತಿ ಪತ್ರಗಳನ್ನು ಹಿಡಿದು ಬೈಕ್‌ಗಳಲ್ಲಿ ರ್‍ಯಾಲಿ ನಡೆಸಿದರು.

### ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ

» **ದಾವಣಗೆರೆ**

ದಾವಣಗೆರೆ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ ಏಪ್ರಿಲ್ 15 ಮತ್ತು 16 ರಂದು ಆಯೋಜಿಸಲಾಗಿದೆ. ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, 2 ಪಾಸ್ ಪೋರ್ಟ್ ಸೈಜ್ ಪೋಟೋ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ತರಬೇತಿ ಕಾರ್ಯಕ್ರಮಕ್ಕೆ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ, ದಾವಣಗೆರೆ ಕಚೇರಿ ದೂ.ಸಂ: 08192-233787 ಸಂಪರ್ಕಿಸಿ.

### ಚುನಾವಣಾ ವೆಚ್ಚದ ದೂರುಗಳಿದ್ದಲ್ಲಿ ಸಲ್ಲಿಸಲು ಮುಕ್ತ ಅವಕಾಶ

» **ದಾವಣಗೆರೆ**

ಲೋಕಸಭಾ ಚುನಾವಣೆ ನಡೆಯುತ್ತಿದ್ದು ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ಚುನಾವಣಾ ವೆಚ್ಚ ವೀಕ್ಷಕರನ್ನಾಗಿ ಪ್ರತಿಭಾ ಸಿಂಗ್ ಇವರನ್ನು ನೇಮಕ ಮಾಡಿದ್ದು ಅವರು ಏಪ್ರಿಲ್ 11 ರಿಂದ ದಾವಣಗೆರೆ ಕ್ಷೇತ್ರದಲ್ಲಿ ವಾಸ್ತವ್ಯ ಹೂಡಿದ್ದಾರೆ. ಚುನಾವಣಾ ವೆಚ್ಚಕ್ಕೆಸಂಬಂಧಿಸಿದಂತೆಸಾರ್ವಜನಿಕರಿಂದದೂರು ಗಳಿದ್ದಲ್ಲಿ ವೀಕ್ಷಕರ ಮೊಬೈಲ್‌ಗೆ ಸಂಪರ್ಕಿಸಬಹುದು. ಅಥವಾ ಇ-ಮೇಲ್ ಮೂಲಕ ದೂರು ನೀಡಬಹುದಾಗಿದೆ. ಇ-ಮೇಲ್ ವಿಳಾಸ;expobs13dvg@gmail.com, ಮೊಬೈಲ್ ಸಂಖ್ಯೆ 7795492549 ಗೆ ಕರೆ ಮಾಡಬಹುದಾಗಿದೆ.

### ಶವ ಪತ್ತೆ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಸಂತೆಹೊಂಡದ ಮುಂಭಾಗದ ಮೆದೇಹಳ್ಳಿ ರಸ್ತೆಯಲ್ಲಿರುವ ಶೃಂಗಾರ್ ಫ್ಯಾನ್ಸಿ ಬ್ಯಾಂಗಲ್ ಸ್ಟೋರ್ ಮುಂಭಾಗ ಸಿಮೆಂಟ್ ಕಟ್ಟೆಯ ಪಕ್ಕದಲ್ಲಿ ಸುಮಾರು 40-50 ವರ್ಷದ ಅನಾಮಧೇಯ ಗಂಡಸಿನ ಶವ ಪತ್ತೆಯಾಗಿದ್ದು, ಈ ಕುರಿತು ಏಪ್ರಿಲ್ 12ರಂದು ನಗರದ ಕೋಟೆ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಅನಾಮದೇಯ ವ್ಯಕ್ತಿಯ ಚಹರೆ ಇಂತಿದೆ. ಅನಮಾದೇಯ ವ್ಯಕ್ತಿಯು ಸು.40-50 ವರ್ಷ, 5.4 ಅಡಿ ಎತ್ತರ, ಕೋಲುಮುಖ, ಎಣ್ಣೆಗೆಂಪು ಮೈಬಣ್ಣ, ಬಡಕಲು ಶರೀರ, 2 ಇಂಚು ಉದ್ದದ ಕಪ್ಪು ಬಿಳುಪಿನ ಕೂದಲು, ಕುರುಚಲು ಗಡ್ಡ ಮೀಸೆ, ಎಡಗೈ ಮೇಲೆ ಗಂಗಾ ಎಂದು ಅಚ್ಚೆ ಹಾಕಿಸಿದ ಗುರುತು ಕಂಡುಬರುತ್ತದೆ. ಮೃತನು ಕೆಂಪು, ಹಳದಿ ಹಾಗೂ ಬಿಳಿ ಗೆರೆಗಳುಳ್ಳ ತುಂಬು ತೋಳಿನ ರೆಡಿಮೇಡ್ ಶರ್ಟ್, ಪಾಚಿ ನೀಲಿ ಕೆಂಪು ಬಣ್ಣಗಳ ಡಿಸೈನುಳ್ಳ ಜೇಬುಗಳಿರುವ ಎಲೆಸ್ಟ್ರಿಕ್ ಚಡ್ಡಿ, ನೀಲಿ ಕಪ್ಪು ಬಣ್ಣಗಳ ಚೆಕ್ಸ್ ಲುಂಗಿ ಪಂಜೆ, ಬಿಳಿ ಮತ್ತು ಪಿಂಕ್ ಕಲರ್ ಚೆಕ್ಸ್ ಟವೆಲ್ ಹಾಗೂ ಕಪ್ಪು ಬಣ್ಣದ ರಬ್ಬರ್ ಚಪ್ಪಲಿಗಳಿರುತ್ತವೆ. ಶವವನ್ನು ಚಿತ್ರದುರ್ಗ ಜಿಲ್ಲಾಸ್ಪತ್ರೆ ಶವಾಗಾರ ಕೊಠಡಿಯ ಶೈಥ್ಯಾಗಾರದಲ್ಲಿರಿಸಲಾಗಿರುತ್ತದೆ. ಈ ಮೇಲ್ಕಂಡ ಅನಾಮದೇಯ ವ್ಯಕ್ತಿಯ ಕುರಿತು ಮಾಹಿತಿ ತಿಳಿದು ಬಂದಲ್ಲಿ ಪೋಲಿಸ್ ನಿರೀಕ್ಷಕರು ಕೋಟೆ ಪೋಲಿಸ್ ಠಾಣೆ 08194-222933. 9480803145, ಪೋಲಿಸ್ ಉಪಾಧೀಕ್ಷಕರು ಚಿತ್ರದುರ್ಗ ಉಪವಿಭಾಗ 08194-222430. 9480803120, ಚಿತ್ರದುರ್ಗ ಜಿಲ್ಲಾ ಪೋಲಿಸ್ ಕಂಟ್ರೋಲ್ ರೂಂ 08191-222782 ಗೆ ಸಂಪರ್ಕಿಸಬಹುದು.

### ಕಾಲ್ನಡಿಗೆ ಜಾಥಾ

» **ದಾವಣಗೆರೆ**

ಲೋಕಸಭಾ ಚುನಾವಣಾ ಮತದಾರರ ಜಾಗೃತಿ ಅಂಗವಾಗಿ ಏಪ್ರಿಲ್ 14 ರಂದು ಬೆಳಗ್ಗೆ 9 ಗಂಟೆಗೆ ಜಿಲ್ಲಾ ಕವಾಯತು ಮೈದಾನದಿಂದ ಪ್ರಾರಂಭಿಸಿ ದೇವರಾಜ್ ಅರಸ್ ಬಡಾವಣೆ ದಾವಣಗೆರೆ ಇಲ್ಲಿ ಜಿಲ್ಲಾ ಗೃಹ ರಕ್ಷಕದಳದ ಸಿಬ್ಬಂದಿಗಳಿಂದ ಮತದಾನದ ಜಾಗೃತಿ ಕಾಲ್ನಡಿಗೆ ಜಾಥಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

### ಪರಿಶಿಷ್ಟರ ಹಣ ಗ್ಯಾರಂಟಿಗೆ ಬಳಸಿದ ರಾಜ್ಯ ಸರ್ಕಾರ: ವಿಜಯೇಂದ್ರ

# ದಲಿತ ವಿರೋಧಿ ಕಾಂಗ್ರೆಸ್‌ಗೆ ತಕ್ಕ ಪಾಠಕಲಿಸಿ

» **ಹೊಳಲ್ಕೆರೆ**

ಮಹಿಳೆಯರಿಗೆ ಸುರಕ್ಷತೆ ನೀಡದೆ ಅಧಿಕಾರದ ಅಮಲಿನಲ್ಲಿ ತೇಲುತ್ತಿರುವ ಕಾಂಗ್ರೆಸ್ ಸರ್ಕಾರಕ್ಕೆ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಿ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳರವರನ್ನು ಎರಡು ಲಕ್ಷಗಳಿಗೂ ಅಧಿಕ ಮತಗಳಿಂದ ಗೆಲ್ಲಿಸಿ ಎಂದು ಬಿಜೆಪಿ. ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮತದಾರರಲ್ಲಿ ಮನವಿ ಮಾಡಿದರು.



ಪಟ್ಟಣದ ಕೊಟ್ರೆನಂಜಪ್ಪ ಪದವಿಪೂರ್ವ ಕಾಲೇಜು ಮೈದಾನದಲ್ಲಿ ನಡೆದ ಕಾರ್ಯಕರ್ತರ ಹಾಗೂ ಅಭಿಮಾನಿಗಳ ಸಮಾವೇಶ ಉದ್ಘಾಟಿಸಿ ಮಾತನಾಡಿದರು.

ದೇಶಕ್ಕೆ ಸಂವಿಧಾನ ಕೊಟ್ಟಂತ ಡಾ.ಬಿ.ಅಂಬೇಡ್ಕರ್‌ರವರನ್ನು ಪಾರ್ಲಿಮೆಂಟ್ ಚುನಾವಣೆಯಲ್ಲಿ ಸೋಲಿಸಿದ ಕಾಂಗ್ರೆಸ್‌ಗೆ ಅಂಬೇಡ್ಕರ್‌ರವರ ಹೆಸರೇಳುವ ಯೋಗ್ಯತೆಯಿಲ್ಲ. ಅವರ ಅಂತ್ಯ ಸಂಸ್ಕಾರಕ್ಕೂ ಗೌರವ ಕೊಡಲಿಲ್ಲ. ರಾಜ್ಯದಲ್ಲಿ ಬಿಜೆಪಿ. ಅಧಿಕಾರದಲ್ಲಿದ್ದಾಗ ಜಾರಿಗೆ ತಂದ ಕಿಸಾನ್ ಸಮ್ಮಾನ್, ರೈತರ ಮಕ್ಕಳ ಶಿಕ್ಷಣಕ್ಕೆ ಅನುಕೂಲವಾಗುವಂತ ವಿದ್ಯಾಸಿರಿ ಇವೆಲ್ಲಕ್ಕೂ ಕಾಂಗ್ರೆಸ್ ಕಲ್ಲು ಹಾಕಿದೆ. ರಾಜ್ಯದಲ್ಲಿ ರೈತರಿಗೆ ಬೆಳೆ ನಷ್ಟ ಬರಪರಿಹಾರ ಕೊಡದೆ ಕೇಂದ್ರದ ಮೇಲೆ ಗೂಬೆ ಕೂರಿಸುತ್ತಿದೆ. ದೇಶದ ಒಂಬತ್ತು ರಾಜ್ಯಗಳಲ್ಲಿ ಬರಗಾಲವಿದೆ. ಅಲ್ಲಿನ ಮುಖ್ಯಮಂತ್ರಿಗಳೆ ಖಜಾನೆಯಿಂದ ಪರಿಹಾರ ನೀಡಿದ್ದಾರೆ. ನಮ್ಮ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ರೈತರಿಗೆ ನಯಾ ಪೈಸೆಯನ್ನು ಕೊಟ್ಟಿಲ್ಲ. 680 ಕೋಟಿ ರೂ.ಗಳನ್ನು ಹೈನುಗಾರಿಕೆಗೆ ಬಾಕಿ ಉಳಿಸಿಕೊಂಡಿದೆ. ಇಂತಹ ಅನಿಷ್ಟ ಸರ್ಕಾರವನ್ನು ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಸೋಲಿಸಬೇಕಿರುವುದರಿಂದ ಪ್ರತಿ ಬೂತ್‌ನಲ್ಲಿ ಮನೆ ಮನೆಗೆ ಹೋಗಿ ಬಿಜೆಪಿ.ಯ ಸಾಧನೆಗಳನ್ನು ತಿಳಿಸಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಗೋವಿಂದ ಕಾರಜೋಳರವರ ಗೆಲುವಿಗೆ ಪ್ರಾಮಾಣಿಕವಾಗಿ ಶ್ರಮಿಸಿ ಎಂದು ಕಾರ್ಯಕರ್ತರಲ್ಲಿ ವಿನಂತಿಸಿದರು.

ದೇಶದ ಮಾಜಿ ಪ್ರಧಾನಿ ಹೆಚ್.ಡಿ.ದೇವೆಗೌಡರು ಬಿಜೆಪಿ.ಯೊಂದಿಗೆ ಹೊಂದಾಣಿಕೆ ಮಾಡಿಕೊಂಡಿರುವುದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ಗೆ ನಿದ್ದೆ ಬರುತ್ತಿಲ್ಲ. ದೇಶದ ಭವಿಷ್ಯ ರೂಪಿಸುವ ಚುನಾವಣೆ ಇದಾಗಿರುವುದರಿಂದ ಕಾರ್ಯಕರ್ತರು ಹಗಲು ರಾತ್ರಿ ಕೆಲಸ ಮಾಡಿ ಅಭ್ಯರ್ಥಿ ಗೋವಿಂದ ಕಾರಜೋಳರವರನ್ನು ಗೆಲ್ಲಿಸಿ ಎಂದು ಕೋರಿದ ಬಿ.ವೈ.ವಿಜಯೇಂದ್ರ ಯಾವ ಮುಖವಿಟ್ಟುಕೊಂಡು ಕಾಂಗ್ರೆಸ್‌ನವರು ಜನರ ಬಳಿ ಹೋಗಿ ಓಟು ಕೇಳುತ್ತಾರೆಂದು ವ್ಯಂಗ್ಯವಾಡಿದರು.

ಪ್ರಧಾನಿ ನರೇಂದ್ರಮೋದಿರವರು ಬಡವರಿಗಾಗಿ ಕೊಟ್ಟಿರುವ ಅಕ್ಕಿಯನ್ನು ನೀಡಲು ಕಾಂಗ್ರೆಸ್‌ಗೆ ಇಷ್ಟವಿಲ್ಲ. ಸುಳ್ಳು ಭರವಸೆಗಳನ್ನು ನೀಡಿ ರಾಜ್ಯದಲ್ಲಿ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಬೆಲೆ ಏರಿಕೆ ಮಾಡಿದ್ದನ್ನು ಬಿಟ್ಟರೆ ಏನು ಸಾಧನೆ ಇಲ್ಲ. ಹಾಲಿನ ದರ ಹೆಚ್ಚಿಸಿದೆ. ಆದರೆ ರೈತರಿಗೆ ಲಾಭವಿಲ್ಲ. ಉಚಿತ ವಿದ್ಯುತ್ ಒಂದು ಕಡೆ ಮತ್ತೊಂದು ಕಡೆ ಒಂದು ಯೂನಿಟ್‌ಗೆ ಇಂತಿಷ್ಟು ದರ ಏರಿಕೆ. ಬಿ.ಎಸ್.ಯಡಿಯೂರಪ್ಪನವರು ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ರೈತರು ತಮ್ಮ ಹೊಲಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ಇಪ್ಪತ್ತೈದು ಸಾವಿರ ರೂ.ಗಳನ್ನು ಪಾವತಿಸಿದರೆ ಟ್ರಾನ್ಸ್‌ಫಾರ್ಮರ್ ಅಳವಡಿಸಿ ವೈರ್ ಎಳೆದು ವಿದ್ಯುತ್ ವ್ಯವಸ್ಥೆ ಕಲ್ಪಿಸಲಾಗುತ್ತಿತ್ತು. ಈಗಿನ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಅಧಿಕಾರದಲ್ಲಿ ರೈತರು ವಿದ್ಯುತ್ ಸಂಪರ್ಕ ಪಡೆಯಬೇಕಾದರೆ ಎರಡುವರೆಯಿಂದ ಮೂರು ಲಕ್ಷ ರೂ.ಗಳನ್ನು ಕಟ್ಟಬೇಕು. ಅಬಕಾರಿ ಶುಲ್ಕ ಜಾಸ್ತಿಯಾಗಿದೆ. ಬಸ್ ದರ ಏರಿಕೆ, ಒಂದು ಕೈಯಲ್ಲಿ ಕೊಟ್ಟು ಮತ್ತೊಂದು ಕೈಯಿಂದ ಕಸಿಯುವ ಕೆಲಸ ಮಾಡುತ್ತಿರುವ ಸಿದ್ದರಾಮಯ್ಯನವರದು ಬರಿ ಮೊಸಳೆ ಕಣ್ಣೀರು ಎಂದು ಬಿ.ವೈ.ವಿಜಯೇಂದ್ರ ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ದ ಹರಿಹಾಯ್ದರು.

ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗಗಳಿಗೆ ಮೀಸಲಾಗಿಟ್ಟಿದ್ದ 24 ಸಾವಿರ ಕೋಟಿ ರೂ.ಗಳನ್ನು ಈಗಿನ ಕಾಂಗ್ರೆಸ್ ಸರ್ಕಾರ ಉಚಿತ ಗ್ಯಾರೆಂಟಿಗಳಿಗೆ ಬಳಿಸಿಕೊಂಡು ಎಸ್ಸಿ.ಎಸ್ಟಿ.ಗಳಿಗೆ ದ್ರೋಹವೆಸಗಿದೆ. ಇಂತಹ ಲಜ್ಜೆಗೆಟ್ಟ ಸರ್ಕಾರವನ್ನು ಅಧಿಕಾರದಿಂದ ಕೆಳಗಿಳಿಸಬೇಕಾಗಿರುವುದರಿಂದ ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ನಮ್ಮ ಪಕ್ಷದ ಅಭ್ಯರ್ಥಿಗಳು ಗೆಲ್ಲಬೇಕು ಎಂದು ಹೇಳಿದರು.

ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಮಾತನಾಡಿ ನಂಬಿದವರಿಗೆ ಮೋಸ ಮಾಡುವ ಜಾಯಮಾನ ನಮ್ಮದಲ್ಲ. ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತೇವೆ. ನನ್ನ ಪುತ್ರ ಎಂ.ಸಿ.ರಘುಚಂದನ್ ಕೂಡ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಪ್ರಬಲ ಆಕಾಂಕ್ಷಿಯಾಗಿದ್ದ. ಆದರೆ ರಾಜ್ಯದ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪನವರ ಮಾತಿಗೆ ಬೆಲೆ ಕೊಟ್ಟು ಸುಮ್ಮನಾಗಿದ್ದೇವೆ. ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳರವರನ್ನು ಹೆಚ್ಚಿನ ಮತಗಳ ಅಂತರದಿಂದ ಗೆಲ್ಲಿಸುವುದಾಗಿ ಬಿ.ವೈ.ವಿಜಯೇಂದ್ರರವರಿಗೆ ಭರವಸೆ ನೀಡಿದರು.

ಹೊಳಲ್ಕೆರೆ ಕ್ಷೇತ್ರದ ಎಲ್ಲಾ ಕೆರೆಗಳಿಗೆ ಅ.2 ರಂದು ನೀರು ತುಂಬಿಸಲಾಗುವುದು. ಅದಕ್ಕಾಗಿ ಎಲ್ಲಾ ಕೆರೆಗಳಿಗೆ ಪೈಪ್‌ಲೈನ್ ಅಳವಡಿಸಲಾಗಿದೆ. ನಾಲ್ಕು ನೂರು ಕೋಟಿ ರೂ.ಗಳಿಗೂ ಹೆಚ್ಚು ಹಣ ತಂದಿದ್ದೇನೆ. ತುಂಗಭದ್ರಾ ಹಾಗೂ ಹಿರಿಯೂರಿನ ವಾಣಿವಿಲಾಸ ಸಾಗರದಿಂದ ನೀರು ತಂದು ಪ್ರತಿ ಮನೆಗೆ ಶುದ್ದ ಕುಡಿಯುವ ನೀರು ಪೂರೈಸಲಾಗುವುದು. ಎಲ್ಲಾ ಹಳ್ಳಿಗಳಲ್ಲಿ ಸಿಮೆಂಟ್ ರಸ್ತೆ ಮಾಡಿಸಿದ್ದೇನೆ. ಬ್ರಿಟೀಷರ ಕಾಲದ ಶಾಲೆಗಳನ್ನು ಕೆಡವಿ ಗುಣಮಟ್ಟದ ಕಟ್ಟಡಗಳನ್ನು ಕಟ್ಟಿಸಲಾಗಿದೆ. ತಲೆ ತಗ್ಗಿಸಿ ಎಂದಿಗೂ ರಾಜಕಾರಣ ಮಾಡಿದವನಲ್ಲ. ಬಿ.ವೈ.ವಿಜಯೇಂದ್ರರವರು ಮುಂದೆ ರಾಜ್ಯದ ಮುಖ್ಯಮಂತ್ರಿಯಾಗುತ್ತಾರೆಂಬ ವಿಶ್ವಾಸವಿದೆ ಎಂದರು.

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ. ಅಭ್ಯರ್ಥಿ ಗೋವಿಂದ ಕಾರಜೋಳ ಮಾತನಾಡಿ ಇದೆ ತಿಂಗಳ 26 ರಂದು ನಡೆಯುವ ಚುನಾವಣೆಯಲ್ಲಿ ನನ್ನನ್ನು ಗೆಲ್ಲಿಸಿ ನರೇಂದ್ರಮೋದಿರವರ ಕೈಬಲಪಡಿಸಿ ಮತ್ತೊಮ್ಮೆ ದೇಶದ ಪ್ರಧಾನಿಯನ್ನಾಗಿ ಮಾಡಿ ಎಂದು ಕಾರ್ಯಕರ್ತರಲ್ಲಿ ಭಿನ್ನವಿಸಿಕೊಂಡರು.

ಹತ್ತು ವರ್ಷಗಳ ಕಾಲ ದೇಶವನ್ನು ಮುನ್ನಡೆಸಿದ ಪ್ರಧಾನಿ ನರೇಂದ್ರಮೋದಿ ಯಾವುದೇ ಹಗರಣದಲ್ಲಿ ಸಿಕ್ಕಿಹಾಕಿಕೊಂಡಿಲ್ಲ. ಭ್ರಷ್ಠಾಚಾರದ ಆಪಾದನೆಯಿಲ್ಲ. ಜಗತ್ತಿನ ಎಲ್ಲಾ ದೇಶಗಳು ಭಾರತದ ಸ್ನೇಹ ಬಯಸುವ ರೀತಿಯಲ್ಲಿ ಅಧಿಕಾರ ನಡೆಸಿದ್ದಾರೆ. ಬಿಜೆಪಿ. ಸಾಧನೆಯನ್ನು ಮುಂದಿಟ್ಟುಕೊಂಡು ಬೂತ್ ಮಟ್ಟದಲ್ಲಿ ಮನೆ ಮನೆಗೆ ಹೋಗಿ ಧೈರ್ಯದಿಂದ ಮತ ಕೇಳಿ. ಮತಗಟ್ಟೆಗೆ ಮತದಾರರನ್ನು ಕರೆ ತಂದು ಮತ ಹಾಕಿಸುವ ಜವಾಬ್ದಾರಿ ನಿಮ್ಮ ಮೇಲಿದೆ. ನಾಲ್ಕು ನೂರಕ್ಕಿಂತ ಹೆಚ್ಚು ಸ್ಥಾನ ಗೆಲ್ಲಬೇಕಿದೆ. ಕಾಂಗ್ರೆಸ್‌ನಲ್ಲಿ ಪ್ರಧಾನಿಯಾಗುವ ಅರ್ಹತೆ ಯಾರಿಗೂ ಇಲ್ಲ. ದೇಶದ 140 ಕೋಟಿ ಜನ ಮೋದಿಗಾಗಿ ಹಂಬಲಿಸುತ್ತಿದ್ದಾರೆಂದರು.

ಯುವ ಮುಖಂಡ ಎಂ.ಸಿ.ರಘುಚಂದನ್ ಮಾತನಾಡಿ ನಾನು ಕೂಡ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಆಕಾಂಕ್ಷಿಯಾಗಿದ್ದೆ. ಆದರೆ ಟಿಕೇಟ್ ಸಿಗಲಿಲ್ಲ. ಪಕ್ಷದ ಹಿರಿಯರ ಮಾತಿಗೆ ನನ್ನ ತಂದೆಯವರು ಗೌರವ ಕೊಟ್ಟಿದ್ದರಿಂದ ಗೋವಿಂದ ಕಾರಜೋಳರವರಿಗೆ ಬೆಂಬಲಿಸಲು ತೀರ್ಮಾನಿಸಿದೆವು. ಅದರಂತೆ ಕೊಟ್ಟ ಮಾತನ್ನು ಉಳಿಸಿಕೊಳ್ಳುತ್ತೇವೆಂದು ಹೇಳಿದರು.

ಬೇರೆ ಬೇರೆ ಪಕ್ಷಗಳಿಂದ ನನಗೆ ಆಹ್ವಾನ ಬಂದಿತ್ತು. ಕಾರ್ಯಕರ್ತರ ಕತ್ತು ಕೊಯ್ದು ಹೋಗುವುದು ಸರಿಯಲ್ಲ. ನಂಬಿಕೆ ಉಳಿಸಿಕೊಂಡಿದ್ದೇನೆ. ಕೊಟ್ಟ ಮಾತಿನಿಂದ ಹಿಂದೆ ಸರಿಯಲ್ಲ. ಈ ಭಾಗದಲ್ಲಿ ಬಿಜೆಪಿ. ಅರಳಬೇಕು. ಗೋವಿಂದ ಕಾರಜೋಳರವರನ್ನು ಎಲ್ಲರೂ ಸೇರಿ ಹೆಚ್ಚಿನ ಮತಗಳ ಅಂತರದಿಂದ ಗೆಲ್ಲಿಸಿಕೊಳ್ಳೋಣ ಎಂದು ಕಾರ್ಯಕರ್ತರನ್ನು ಹುರಿದುಂಬಿಸಿದರು.

ವಿಧಾನಪರಿಷತ್ ಸದಸ್ಯರುಗಳಾದ ರವಿಕುಮಾರ್, ಕೆ.ಎಸ್.ನವೀನ್, ಬಿಜೆಪಿ. ಜಿಲ್ಲಾಧ್ಯಕ್ಷಎ.ಮುರಳಿ,ಹೊಳಲ್ಕೆರೆಮಂಡಲ ಅಧ್ಯಕ್ಷ ಎಂ.ಬಿ.ಸಿದ್ದೇಶ್, ಭರಮಸಾಗರ ಮಂಡಲ ಅಧ್ಯಕ್ಷ ಶೈಲೇಶ್, ಜೆಡಿಎಸ್. ಜಿಲ್ಲಾಧ್ಯಕ್ಷ ಜಯಣ್ಣ, ಲೋಕಸಭಾ ಚುನಾವಣೆ ಸಂಚಾಲಕ ಲಿಂಗಮೂರ್ತಿ, ಬಿಜೆಪಿ ಮತ್ತು ಜೆಡಿಎಸ್.ಚುನಾಯಿತ ಪ್ರತಿನಿಧಿಗಳು ಹಾಗೂ ಕಾರ್ಯಕರ್ತರು ಸಮಾವೇಶದಲ್ಲಿ ಭಾಗವಹಿಸಿದ್ದರು.

## ಬಿ.ಎನ್.ಚಂದ್ರಪ್ಪನವರ ಪರವಾಗಿ ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪನವರಿಂದ ಪ್ರಚಾರ



» **ಹೊಸದುರ್ಗ**

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ಬಿ.ಎನ್.ಚಂದ್ರಪ್ಪನವರ ಪರವಾಗಿ ಶಾಸಕ ಬಿ.ಜಿ.ಗೋವಿಂದಪ್ಪ ತಾಲ್ಲೋಕಿನ ಹೆಗ್ಗೆರೆ ಗ್ರಾಮ ಪಂಚಾಯತಿ ವ್ಯಾಪ್ತಿಯ ಶ್ರೀ ಕ್ಷೇತ್ರ ಕಡವಿಗೆರೆಯ ಮಾವಿನಕಣಿವೆ ಶ್ರೀ ಲಕ್ಷ್ಮೀರಂಗನಾಥ ಸ್ವಾಮಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ ಚುನಾವಣೆ ಪ್ರಚಾರಕ್ಕೆ ಚಾಲನೆ ನೀಡಿದರು.

ಈ ಸಂಧರ್ಬದಲ್ಲಿ ಹೆಗ್ಗೆರೆ ಗ್ರಾಮ ಪಂಚಾಯತಿ ವ್ಯಾಪ್ತಿಯ ಕಡವಿಗೆರೆ, ವೆಂಗಳಾಪುರ, ಓಬಳಾಪುರ ತಾಂಡ್ಯ, ಓಬಳಾಪುರ, ಹೆಗ್ಗೆರೆ, ಸೊಪ್ಪಿನಗುಡ್ಲು, ದಳವಾಯಿಕಟ್ಟೆ ಮತ್ತು ಗಿರಿಮಲ್ಲಯ್ಯನಪಾಳ್ಯ ಗ್ರಾಮಗಳಲ್ಲಿ ಈ ದೇಶದ ಭವಿಷ್ಯದ ಹಿತದೃಷ್ಟಿಯಿಂದ ಕಾಂಗ್ರೆಸ್ ಪಕ್ಷಕ್ಕೆ ಮತನೀಡಬೇಕೆಂದು ಮನವಿ ಮಾಡಿದರು..

ಈ ಸಂಧರ್ಬದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಲೋಕೇಶಪ್ಪ, ಪದ್ಮನಾಭ್, ಪ್ರಚಾರ ಸಮಿತಿ ಅಧ್ಯಕ್ಷಆರ್.ರಾಜಣ್ಣ, ಟಿಎಪಿಸಿಎಂಎಸ್ ಅಧ್ಯಕ್ಷ ಹೆಚ್.ಟಿ.ಬಸವರಾಜ್, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಶ್ರೀಮತಿ ದೀಪಿಕಾ ಸತೀಶ್, ಗ್ಯಾರಂಟಿ ಅನುಷ್ಠಾನ ಸಮಿತಿ ಉಪಾಧ್ಯಕ್ಷ ಶ್ರೀನಿವಾಸ್, ತಾಲೂಕು ಬ್ಲಾಕ್ ಕಾಂಗ್ರೇಸ್ ಉಪಾಧ್ಯಕ್ಷ ಬಿ.ಅಶ್ರುಫ್‌ವುಲ್ಲಾ

ಯುವ ಕಾಂಗ್ರೆಸ್ ಅಧ್ಯಕ್ಷ ರಾಜೇಂದ್ರ ಪ್ರಸಾದ್ ಹಾಗೂ ಸ್ಥಳೀಯ ಮುಖಂಡರುಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಚಿತ್ರದುರ್ಗ: ಇಂದು ಬಿಎಸ್‌ವೈ ಮತಯಾಚನೆ

» **ಚಿತ್ರದುರ್ಗ**

ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪರವರು ಏ. 13 ರ ಶನಿವಾರ ಚಿತ್ರದುರ್ಗ ಪ್ರವಾಸ ಮಾಡುವುದರ ಮೂಲಕ ಚಿತ್ರದುರ್ಗ



ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಪರವಾಗಿ ಮತ ಯಾಚನೆ ಕಾರ್ಯ ಹಾಗೂ ಬಹಿರಂಗ ಸಭೆಯಲ್ಲಿ ಭಾಗವಹಿಸಲಿದ್ದಾರೆ.

ಬೆಳಿಗ್ಗೆ 9.45ಕ್ಕೆ ಜಕ್ಕೂರು ವಿಮಾನ ನಿಲ್ದಾಣದಿಂದ ಹೆಲಿಕ್ಯಾಪ್ಟರ್ ಮೂಲಕ 11.15ಕ್ಕೆ ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರು ತಾಲ್ಲೂಕಿನ ರಾಂಪುರ ಹೆಲಿಪ್ಯಾಡ್‌ಗೆ ಆಗಮಿಸಲಿದ್ದಾರೆ. 11.30ರಿಂದ ರಾಂಪುರ ಬಸ್ ನಿಲ್ದಾಣದ ಬಳಿಯಲ್ಲಿ ಹೋಬಳಿ ಮಟ್ಟದ ಬೃಹತ್ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಅಲ್ಲಿಂದ 1.15ಕ್ಕೆ ಚಳ್ಳಕೆರೆಗೆ ರಸ್ತೆಯ ಮೂಲಕ ಆಗಮಿಸಿ 2 ಗಂಟೆಯಿಂದ ರಾಘವೇಂದ್ರ ಕನ್ವೆಷನ್ ಹಾಲ್‌ನಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿರುವರು. ಅಲ್ಲಿಂದ 3.50ಕ್ಕೆ ಹಿರಿಯೂರಿಗೆ ತೆರಳಿ ಅಲ್ಲಿನ ತಹಾ ಕನ್ವಿಷನ್ ಹಾಲ್‌ನಲ್ಲಿ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ತದ ನಂತರ ಅಲ್ಲಿಂದ ಹೆಲಿಕ್ಯಾಪ್ಟರ್ ಮೂಲಕ ಬೆಂಗಳೂರನ್ನು ತಲುಪಲಿದ್ದಾರೆ.ಕೇಂದ್ರ ಸಚಿವ ಎ.ನಾರಾಯಣಸ್ವಾಮಿ, ಬಿಜೆಪಿ ಜಿಲ್ಲಾಧ್ಯಕ್ಷ ಎ.ಮುರಳಿ, ವಿಧಾನ ಪರಿಷತ್ ಸದಸ್ಯರಾದ ಎನ್.ರವಿಕುಮಾರ್, ಬಿಜೆಪಿ ಅಭ್ಯರ್ಥಿ ಗೋವಿಂದ ಕಾರಜೋಳ, ಶಾಸಕರುಗಳಾದ ಎಂ.ಚಂದ್ರಪ್ಪ, ವೈ.ಎ.ನಾರಾಯಣಸ್ವಾಮಿ, ಚಿದಾನಂದ ಗೌಡ, ಕೆ.ಎಸ್.ನವೀನ್, ಮಾಜಿ ಶಾಸಕರಾದ ಜಿ.ಎಚ್.ತಿಪ್ಪಾರೆಡ್ಡಿ, ನೇರ್ಲಗುಂಟೆ ತಿಪ್ಪೇಸ್ವಾಮಿ ಭಾಗವಹಿಸಲಿದ್ದಾರೆ.


## ಪ್ರಮುಖ ಸುದ್ದಿ

### ಚಿತ್ರದುರ್ಗದ ಉದ್ಘಾಟನೆಗೊಂಡ ದೇಗುಲಕ್ಕೆಹರಿದು ಬಂದ ಭಕ್ತ ಸಾಗರ

# ಲೋಕಾರ್ಪಣೆಗೊಂಡ ಶ್ರೀಶನೇಶ್ವರ ಸ್ವಾಮಿ ದೇವಸ್ಥಾನ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಐ.ಯು.ಡಿ.ಪಿ. ಲೇಔಟ್ ಮೇಲ್ಭಾಗ, ಸೂರ್ಯಪುತ್ರ ನಗರದಲ್ಲಿ ನೂತನವಾಗಿ ಶ್ರೀ ಶ್ರೀಶನೇಶ್ವರಸ್ವಾಮಿ ಲೋಕ ಕಲ್ಯಾಣ ಟ್ರಸ್ಟ್ ವತಿಯಿಂದ ನಿರ್ಮಾಣವಾಗಿರುವ ಶ್ರೀ ಶ್ರೀಶನೇಶ್ವರಸ್ವಾಮಿಯ ದೇಗುಲ ಲೋಕಾರ್ಪಣೆ ಮೂರು ದಿನಗಳ ವಿವಿಧ ಧಾರ್ಮಿಕ ಸಮಾರಂಭಗಳ ಮೂಲಕ ಶ್ರೀ ಶ್ರೀಶನೇಶ್ವರಸ್ವಾಮಿಯ ಪ್ರಾಣ ಪ್ರತಿಷ್ಠಾಪನೆ ಮತ್ತು ಗೋಪುರ ಕಳಸಾರೋಹಣ, ಅನ್ನ ಸಂತರ್ಪಣೆ ಪೂಜಾ ಮಹೋತ್ಸವ ಅರ್ಥಪೂರ್ಣವಾಗಿ ನಡೆಯಿತು.





ಶ್ರೀ ಶ್ರೀಶನೇಶ್ವರಸ್ವಾಮಿ ಲೋಕ ಕಲ್ಯಾಣ ಟ್ರಸ್ಟ್ ಪೀಠಾಧಿಪತಿಗಳಾಗಿದ್ದ ಲಿಂಗೈಕ್ಯ ಶ್ರೀ ಮೋಹನ್ ಕುಮಾರ್ ಸ್ವಾಮೀಜಿ ಇವರ ಕೃಪಾಶೀರ್ವಾದೊಂದಿಗೆ ಮಹೋತ್ಸವ ನಡೆಯಿತು. ಗಣಪತಿ ಪೂಜೆ, ಪುಣ್ಯಾಹ, ದೇವನಾಂದಿ, ಪಂಚಗವ್ಯ, ರಕ್ಷಾಸೂತ್ರಧಾರಣೆ, ಜಲಾಧಿವಾಸ, ಕ್ಷಿರಾಧಿವಾಸ, ಧಾನ್ಯಾಧಿವಾಸ, ಮಂಗಳಾರತಿ, ಕಲಶಸ್ಥಾಪನೆ, ನವಗ್ರಹ ಹೋಮ, ಮೃತ್ಯುಂಜಯ ಹೋಮ, ಗಣಪತಿ ಹೋಮ, ರುದ್ರ ಹೋಮ, ಶನೈಶ್ವರ ಹೋಮ, ಪುರ್ಣಾಹುತಿ, ಮಹಾಮಂಗಳಾರತಿ ಸಂಜೆ ವಾಸ್ತು ಹೋಮ, ರಾಕ್ಷೆಘ್ನ ಹೋಮ, ಬಲಿಪ್ರಧಾನ ರತ್ನಾಧಿವಾಸ, ಚಿತ್ರಪಟಾಧಿ ವಾಸ, ಫಲಾಧಿವಾಸ, ಶಯ್ಯಧಿವಾಸ ಅಷ್ಟಬಂಧನ ನಡೆದವು.

ಸ್ವಸ್ತಿಶ್ರೀ ವಿಜಯಾಭ್ಯದಯ ಶ್ರೀ ಮನ್ನಪ ಶಾಲಿವಾಹನ ಶಕೆ 1945ನೇ ಶ್ರೀ ಶೋಭಕೃತ್‌ನಾಮ ಸಂವತ್ಸರ ಫಾಲ್ಗುಣ ಮಾಸ, ಕೃಷ್ಣ ಪಕ್ಷ ದ್ವಾದಶಿ ಶನಿವಾರ ಶುಭ ಮಕರ ಲಗ್ನದಲ್ಲಿ ಶ್ರೀ ಶನೈಶ್ವರಸ್ವಾಮಿಯವರ ಪ್ರತಿಷ್ಠಾಪನ ಕುಂಭಾಭಿಷೇಕ ದೇವತಾ ದರ್ಶನ ಮೂಹೂರ್ತ ಗೋಪುರ ಕಳಸ ಸ್ಥಾಪನೆಯನ್ನು ಬೆಲಗೂರಿನ ಶ್ರೀ ಹನುಮನ್ನದೂತ ಅವಧೂತರಾದ ಶ್ರೀ ಬಿಂಧುಮಾಧವ ಶರ್ಮಾ ಗುರುಗಳ ಶಿಷ್ಯರಾದ ಶ್ರೀ ವಿಜಯಮಾರುತಿ ಶರ್ಮಾ ಗುರುಗಳ ಅಮೃತ ಹಸ್ತದಿಂದ ಶ್ರೀ ಶ್ರೀಶನೈಶ್ವರಸ್ವಾಮಿಯ ಪ್ರತಿಷ್ಠಾಪನಾ ಮತ್ತು ಕಳಶರೋಹಣ ಕಾರ್ಯಕ್ರಮ ನೆರವೇರಿಸಿದರು. ಶ್ರೀ ಮೋಹನ್ ಸ್ವಾಮೀಜಿ ಗಳ ಪುತ್ರ ಭಾನುಕುಮಾರ್ ಉಪಸ್ಥಿತರಿದ್ದರು.

ಗೋಪುರಕಳಸ ಸ್ಥಾಪನೆ ನಂತರ ಅಭಿಷೇಕ ಭಕ್ತರಿಂದ ತತ್ಯನ್ಯಾಸಾದಿ ಕಲಾಹೋಮ, ಶನೈಶ್ವರ ಮೂಲಮಂತ್ರ ಹೋಮ, ಮಹಾಪೂರ್ಣಾಹುತಿ ಕುಂಭಾಭಿಷೇಕ, ಪಂಚಾಮೃತ ಅಭಿಷೇಕ, ರುದ್ರಭಿಷೇಕ, ಮಂಗಳದ್ರವ್ಯಗಳ ಅಭಿಷೇಕ, ಅಲಂಕಾರ ಮಹಾಮಂಗಳಾರತಿ ತೀರ್ಥಪ್ರಸಾದ ವಿನಿಯೋಗ, ಅನ್ನ ಸಂತರ್ಪಣೆ ನಡೆದವು.

ಕಾರ್ಯಕಾರಿ ಸಮಿತಿ ಅಧ್ಯಕ್ಷರಾದ ಸಿ. ಶಂಕರಮೂರ್ತಿ, ಉಪಾಧ್ಯಕ್ಷರಾದ ಎಂ.ಕೆ. ರಘುನಾಥ್, ಕಾರ್ಯಾಧ್ಯಕ್ಷರಾದ ಮಂಜುನಾಥ್, ಸಹ ಕಾರ್ಯದರ್ಶಿ ಎಸ್.ಟಿ. ನವೀನ್ ಕುಮಾರ್, ಖಜಾಂಚಿ, ಸಿ.ಎಸ್. ಶಂಕರ್,, ಚಿಕ್ಕಣ್ಣ, ಜಿ.ಎನ್. ರಾಜೇಶ್ವರಿ, ಸ್ಥಾನ ಉಸ್ತುವಾರಿ ಜಿ.ಎನ್. ಮಹೇಶ್ ನಿರ್ದೇಶಕರಾದ ಎನ್.ಜಿ.ಚಂದ್ರಯ್ಯ ಮಾಸ್ಟರ್, ಬೋರಯ್ಯ, ಜಗದೀಶ್, ಡಿ. ಗೋಪಿ, ಮಾಲತೇಶ್ ಅರಸ್, ಶಿವಕುಮಾರ್ ಸೇರಿದಂತೆ ಅನೇಕರು ಉಪಸ್ಥಿತಿದ್ದರು.

**ಫಾಸ್ಟ್ ನ್ಯೂಸ್**

## ಆಟೋಚಾಲಕನ ಪುತ್ರಗೆ ವಾಣಿಜ್ಯ ವಿಭಾಗದಲ್ಲಿ ಶೇ.98.83 ಫಲಿತಾಂಶ



» **ಚಳ್ಳಕೆರೆ**

ಇತ್ತೀಚೆಗೆ ಪ್ರಕಟವಾದ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ನಗರದ ಗಾಂಧಿನಗರ ನಿವಾಸಿ ಆಟೋಚಾಲಕ ಖುದ್ದುಸ್‌ಯವರ ಪುತ್ರ ಕೆ.ಸೈಯದ್‌ಫಯಾಜ್ ವಾಣಿಜ್ಯ ವಿಭಾಗದಲ್ಲಿ ಒಟ್ಟು 593(98.83) ಅಂಕ ಪಡೆದು ಮೂರು ವಿಷಯದಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದಿದ್ದಾನೆ. ನಗರದ ವಾಸವಿ ಪದವಿಪೂರ್ವಕಾಲೇಜಿನಲ್ಲಿ ಅಭ್ಯಾಸ ಮಾಡುತ್ತಿರುವ ಕೆ.ಸೈಯದ್‌ಫಯಾಜ್ ನನ್ನ ತಂದೆ ಆಟೋಚಾಲಕರಾಗಿದ್ದರೂ ಶಿಕ್ಷಣದ ಬಗ್ಗೆ ಅಪಾರವಾದ ವಿಶ್ವಾಸ ಹೊಂದಿದ್ದಾರೆ. ಪ್ರತಿನಿತ್ಯ ನನ್ನ ಅಭ್ಯಾಸಕ್ಕೆ ಪ್ರೇರಣೆ ನೀಡುತ್ತಿದ್ದರು. ನನ್ನ ಸಹೋದರಿ ಸಾನಿಯಾ ತುಮಕೂರಿನಲ್ಲಿ ಇಂಜಿನಿಯರಿಂಗ್ ಅಭ್ಯಾಸ ಮಾಡುತ್ತಿದ್ದು, ಆಟೋಚಾಲನೆಯಿಂದ ಬರುವ ಕಡಿಮೆ ಹಣದಿಂದಲೇ ನಮ್ಮ ವಿದ್ಯಾಭ್ಯಾಸಕ್ಕೆ ನನ್ನ ತಂದೆ ಖುದ್ದುಸ್ ಸಹಾಯ ಮಾಡುತ್ತಿದ್ದು, ನಾನು ಮುಂದಿನನ ದಿನಗಳಲ್ಲಿ ಬಿಸಿಎ ನಂತರ ಸಿಎ ಪದವಿ ಪಡೆದು ಉತ್ತಮ ಹುದ್ದೆ ಪಡೆಯುವ ಆಸೆಯನ್ನು ಹೊಂದಿದ್ದೇನೆಂದು ಕೆ.ಸೈಯದ್‌ಫಯಾಜ್ ತನ್ನ ಸಂತಸ ಹಂಚಿಕೊಂಡಿದ್ದಾರೆ. ನಗರದ ಸುರಕ್ಷಾ ಪಾಲಿಕ್ಲಿನಿಕ್ ಮಾಲೀಕರ ಬಿ.ಫರೀದ್‌ಖಾನ್ ಮತ್ತು ಸ್ನೇಹ ಬಳಗ ಉತ್ತಮ ಫಲಿತಾಶ ಪಡೆದ ಕೆ.ಸೈಯದ್‌ಫಯಾಜ್‌ರವರನ್ನು ಅಭಿನಂದಿಸಿದರು.

## ದಾವಣಗೆರೆ 6 ನಾಮಪತ್ರಗಳ ಸಲ್ಲಿಕೆ

» **ದಾವಣಗೆರೆ**

ಲೋಕಸಭೆಗೆ ಸಾರ್ವತ್ರಿಕ ಚುನಾವಣೆ ನಡೆಯುತ್ತಿದ್ದು ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ಏಪ್ರಿಲ್ 12 ರಿಂದ ನಾಮಪತ್ರ ಸಲ್ಲಿಕೆ ಆರಂಭವಾಗಿದ್ದು ಮೊದಲ ದಿನ 5 ಅಭ್ಯರ್ಥಿಗಳಿಂದ 6 ನಾಮಪತ್ರಗಳು ಸಲ್ಲಿಕೆಯಾಗಿವೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ; ವೆಂಕಟೇಶ್ ಎಂ.ವಿ. ತಿಳಿಸಿದ್ದಾರೆ. ಕಾಂಗ್ರೆಸ್ ಡಾ; ಪ್ರಭಾ ಮಲ್ಲಿಕಾರ್ಜುನ್ 2 ನಾಮಪತ್ರ, ತಿಪ್ಪೇಸ್ವಾಮಿ ಕೆ.ಎ ಕಮುನಿಸ್ಟ್, ಉತ್ತಮ ಪ್ರಜಾಕೀಯ ಪಕ್ಷದಿಂದ ಈಶ್ವರ, ಕೆ.ಆರ್.ಎಸ್. ಪಕ್ಷದಿಂದ ರಾಘವೇಂದ್ರ ಜಿ.ಪಿ ಹಾಗೂ ಪಕ್ಷೇತರರಾಗಿ ವಿನಯ್‌ಕುಮಾರ್ ಜಿ.ಬಿ ಇವರು ನಾಮಪತ್ರ ಸಲ್ಲಿಸಿದ್ದಾರೆ.

### ದೇವರೆಡ್ಡಿಹಳ್ಳಿ ಗ್ರಾಮ ಪಂಚಾಯಿತಿ ಕೆರೆ ಹೂಳಿನ ಮಣ್ಣು ಎತ್ತಲು ಅವಕಾಶ ನೀಡದ ಸಣ್ಣ ನೀರಾವರಿ ಇಲಾಖೆ

# ಮತದಾನ ಬಹಿಷ್ಕಾರಕ್ಕೆ ರೈತರ ನಿರ್ಧಾರ

» **ಚಳ್ಳಕೆರೆ**

ತಾಲ್ಲೂಕಿನ ತಳಕು ಹೋಬಳಿಯ ದೇವರೆಡ್ಡಿಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬುಕ್ಕಾಂಬೂದಿ ಗ್ರಾಮದ ಕೆರೆ ಮಣ್ಣು ಹೂಳೆತ್ತಲು ಗ್ರಾಮಸ್ಥರು ಅಡ್ಡಿಪಡಿಸುತ್ತಿದ್ದು, ದೇವರೆಡ್ಡಿಹಳ್ಳಿ ಗ್ರಾಮದ ರೈತರಿಗೆ ಕೆರೆ ಮಣ್ಣಿನ ಅವಶ್ಯಕತೆ ಇದೆ. ಮಣ್ಣು ಸಾಗಾಟ ಮಾಡಲು ಅವಕಾಶ ನೀಡುವಂತೆ ಕೆಲ ಗ್ರಾಮಸ್ಥರು ಸಣ್ಣ ನೀರಾವರಿ ಇಲಾಖೆ ಅಧಿಕಾರಿಗಳಿಗೆ ಮನವಿ ಮಾಡಿದ್ದಾರೆ.

ಈ ಬಗ್ಗೆ ಪತ್ರಿಕೆಯೊಂದಿಗೆ ಮಾತನಾಡಿದ ರೈತ ಮುಖಂಡರಾದ ಕೆ.ವಿ.ಮಲ್ಲಾರೆಡ್ಡಿ, ಕೆ.ಎನ್.ವಿಶ್ವನಾಥರೆಡ್ಡಿ, ಜಿ.ಟಿ.ಸೋಮಶೇಖರೆಡ್ಡಿ, ಪಿ.ಎನ್. ಮಂಜುನಾಥರೆಡ್ಡಿ, ಜಿ.ಎಸ್.ಸುರೇಶ್‌ರೆಡ್ಡಿ, ತಿಪ್ಪಾರೆಡ್ಡಿ, ಹನುಮಂತರೆಡ್ಡಿ, ನಿಂಗಾರೆಡ್ಡಿ, ಗಿರೀಶ್‌ಕುಮಾರ್ ಮುಂತಾದವರು



ಗ್ರಾಮಸ್ಥರಿಗೆ ಕೆರೆಹೂಳು ಎತ್ತುವ ಮೂಲಕ ಮಣ್ಣು ನೀಡಿದರೆ ಅದನ್ನು ಜಮೀನಿಗಳಿಗೆ ಸದುಪಯೋಗ ಪಡಿಸಿಕೊಳ್ಳುತ್ತಾರೆ. ಆದರೆ, ಸಣ್ಣ ನೀರಾವರಿ ಇಲಾಖೆ ಅಧಿಕಾರಿಗಳು ಈ ಬಗ್ಗೆ ಕ್ರಮ ಕೈಗೊಳ್ಳುತ್ತಿಲ್ಲ. ಅಧಿಕಾರಿಗಳ ಧೋರಣೆಯನ್ನು ಖಂಡಿಸಿ ಗ್ರಾಮ ಪಂಚಾಯಿತಿ ಮುಂಭಾಗದ ಧರಣಿ ನಡೆಸುತ್ತಿದ್ದು, ಈ ತಿಂಗಳ 26ರಂದು ನಡೆಯುವ ಲೋಕಸಭಾ ಚುನಾವಣೆ ಮತದಾನವನ್ನು ಬಹಿಷ್ಕರಿಸುವ ಎಚ್ಚರಿಕೆಯನ್ನು ನೀಡಿದ್ದಾರೆ. ಈ ಬಗ್ಗೆ ಕಳೆದ ಮಾರ್ಚ್ ತಿಂಗಳಲ್ಲೇ ಅಧಿಕಾರಿಗಳಿಗೆಲಿಖಿತಮನವಿಮಾಡಿದರೂ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿಲ್ಲ. ಇದರಿಂದ ರೈತರಿಗೆ ತೊಂದರೆಯಾಗಿದ್ದು, ಅಧಿಕಾರಿಗಳು ಕೂಡಲೇ ಬಂದು ಸೂಕ್ತ ನಿರ್ಧಾರಕೈಗೊಳ್ಳದೇ ಇದ್ದಲ್ಲಿ ಚುನಾವಣಾ ಬಹಿಷ್ಕಾರ ಹಾಕಲಾಗುವುದು ಎಂದು ಅವರು ತಿಳಿಸಿದ್ದಾರೆ.

# ವಿವಿಧ ಬೇಡಿಕೆ ಈಡೇರಿಕೆಗೆ ರೈತ ಸಂಘ ಆಗ್ರಹ

» **ಚಿತ್ರದುರ್ಗ**

ಬ್ಯಾಂಕ್‌ಗಳಲ್ಲಿ ವಿಮೆ ಹಣ ಈ ಬೆಳೆ ಪರಿಹಾರದ ಹಣ ಮತ್ತು ಪಿ.ಎಮ್ ಕಿಸಾನ್ ವೃದ್ಧಾಪ್ಯ ವೇತನದ ಹಣ ಅಂಗವಿಕಲ ವೇತನ ಹಣವನ್ನು ಇತ್ಯಾದಿಗಳನ್ನು ಬ್ಯಾಂಕುಗಳು ಸಾಲಕ್ಕೆ ಜಮೆ ಮಾಡುಕೊಳ್ಳುತ್ತಿವೆ ಇದನ್ನು ಸಾಲಕ್ಕೆ ಪಡೆಯದೆ ವಿತರಿಸಬೇಕು ಎಂದು ಆದೇಶಿಸಬೇಕು. 2023 ಮತ್ತು 2024ರ ಬೆಳೆ ವಿಮೆ ತಾರತಮ್ಯ ಸರಿಪಡಿಸಬೇಕು ಎಲ್ಲಾ ರೈತರಿಗೂ ವಿತರಿಸಬೇಕು ಎಮದು ಸೇರಿದಂತೆ ಇತರೆ ವಿವಿಧ ಬೇಡಿಕೆಯನ್ನು ಈಡೇರಿಸುವಂತೆ ಆಗ್ರಹಿಸಿ, ರಾಜ್ಯ ರೈತ ಸಂಘ ಜಿಲ್ಲಾಡಳಿತದ ಮೂಲಕ ಸರ್ಕಾರವನ್ನು ಆಗ್ರಹಿಸಿದೆ.

ಚಿತ್ರದುರ್ಗ ನಗರದಲ್ಲಿ ಇಂದು ರೈತ ಸಂಘದ ಪದಾಧಿಕಾರಿಗಳು ರೈತರ ಸಮಸ್ಯೆಗಳನ್ನು ಇತ್ಯರ್ಥ ಮಾಡುವಂತೆ ಹಾಗೂ ತಮ್ಮ ಬೇಡಿಕೆಯನ್ನು ಈಡೇರಿಸುವಂತೆ ಆಗ್ರಹಿಸಿ ಮನವಿಯನ್ನು ಸಲ್ಲಿಸಿ, ವಿಮೆ ಕಟ್ಟದ ರೈತರಿಗೆ ಬೆಳೆ ಪರಿಹಾರವನ್ನು ಕೊಡಬೇಕು. ತೋಟಗಾರಿಕೆ ಬೆಳೆ ನಷ್ಟವನ್ನು ಎಲ್ಲಾ ನಷ್ಟಗೊಂಡ ತೋಟಗಾರಿಕೆ ಪರಿಹಾರವನ್ನು ವಿತರಿಸಬೇಕು. ವಿದ್ಯುತ್ ಇಲಾಖೆ ಈ ವರೆಗೆ ಆಕ್ರಮ ಸಕ್ರಮದಲ್ಲಿ ನೊಂದಾಯಿಸಿಕೊಂಡಿರುವ ರೈತರಿಗೆ ಮೂಲಭೂತ ಸೌಕರ್ಯ ತಕ್ಷಣ ಕಲ್ಪಿಸಿ ಕೊಡಬೇಕು. ಮತ್ತು ಹೊಸದಾಗಿ ಆಕ್ರಮ ಸಕ್ರಮದಲ್ಲಿ ನೋಂದಾವಣಿ ಮಾಡಿಕೊಳ್ಳಲು ಅವಕಾಶವನ್ನು ಮಾಡಿಕೊಡಬೇಕು. 2022-23ನೇ ಸಾಲಿನಲ್ಲಿ ಬೆಳೆ ಪರಿಹಾರದಲ್ಲಿ ಆಗಿರುವ ಅವ್ಯವಹಾರವನ್ನು ತನಿಖೆ ಮಾಡಿ ಸೂಕ್ತ ಕ್ರಮ ಕೈಗೊಂಡು ರೈತರಿಗೆ ಪರಿಹಾರ ವಾಪಾಸ್ಸು



ವಿತರಿಸಬೇಕು, ಮತ್ತು ತಪ್ಪಿತಸ್ಥರ ವಿರುದ್ದ ಕಾನೂನು ಕ್ರಮ ಕೈಗೊಳ್ಳಬೇಕು. ಭದ್ರಾ ಮೇಲ್ದಂಡೆ ಕಾಮಗಾರಿಯನ್ನು ಶೀಘ್ರ ಗತಿಯಲ್ಲಿ ಪೂರ್ಣಗೊಳಿಸಬೇಕು. ಭದ್ರಾ ಮೇಲ್ದಂಡೆ ಸಂಬಂಧಿಸಿದಂತೆ, ವಿದ್ಯುತ್ ಜಾಲದ ಕೆಲಸಗಳನ್ನು ಪೂರ್ಣಗೊಳಿಸಿಈ ವರ್ಷ ಮಳೆಗಾಲದಲ್ಲಿ ನೀರು ಹರಿಸಬೇಕು ಎಂದು ಆಗ್ರಹಿಸಲಾಯಿತು.

ಈ ಒತ್ತಾಯಿಗಳನ್ನು ಶೀಘ್ರದಲ್ಲಿ ಡೇರಿಸಬೇಕೆಂದು ಒತ್ತಾಯಿಸಿ ಏ.15 ರಂದು ರೈತರು ಜಿಲ್ಲಾಧಿಕಾರಿಗಳ ಕಛೇರಿ ಮುಂದೆ ಧರಣಿ ಮಾಡಲು ತಿರ್ಮಾನಿಸಲಾಯಿತು. ತಹಶೀಲ್ದಾರ್ ಸಂತೋಷ್‌ಕುಮಾರ್ ಮನವಿಯನ್ನು ಸ್ವೀಕಾರ ಮಾಡಿದರು. ಈ ಸಂದರ್ಭದಲ್ಲಿ ರಾಜ್ಯ ಕಾರ್ಯಾದರ್ಶಿ ಈಚಘಟ್ಟಸಿದ್ದವೀರಪ್ಪ, ಬಸವರಾಜಪ್ಪ, ಹೊಳಲ್ಕೆರೆ ತಾಲ್ಲೂಕು ಅದ್ಯಕ್ಷರು ಸತೀಶ್, ಇಂದು ಚಂದ್ರಮೌಳಿ, ಹಿರಿಯೂರು ತಾಲ್ಲೂಕು ಅಧ್ಯಕ್ಷರು ಕೆ.ಟಿ ತಿಪ್ಪೇಸ್ವಾಮಿ ಸಿದ್ದರಾಮಣ್ಣ, ಚಿತ್ರದುರ್ಗ ತಾಲ್ಲೂಕು ಅಧ್ಯಕ್ಷರು, ಮಂಜುನಾಥ್ ಮುದ್ದಾಪುರ, ನಾಗರಾಜ್ ರೆಡ್ಡಿ, ರವಿಕುಮಾರ್, ಶಿವಕುಮಾರ್ ಹೊಳಲ್ಕೆರೆ ನಗರ ಅಧ್ಯಕ್ಷರು, ರಂಗಸ್ವಾಮಿ ಪ್ರಸನ್ನ ಇನ್ನು ಮುಂತಾದವರು ಇದ್ದರು.

## ಕೊಲ್ಲಪುರದಮ್ಮ ರಥೋತ್ಸವ



» **ಪರಶುರಾಂಪುರ**

ಗ್ರಾಮದ ಲಕ್ಷ್ಮೀಕೊಲ್ಲಪುರದಮ್ಮ ದೇವಿಯ ರಥೋತ್ಸವ ಶ್ರದ್ಧಾ ಭಕ್ತಿಯಿಂದ ಭಕ್ತರ ಸಮ್ಮುಖದಲ್ಲಿ ಶುಕ್ರವಾರ ಸಡಗರ ಸಂಭ್ರಮದಿಂದ ಜರುಗಿತು.ರಥಕ್ಕೆ ಬೆಳಗ್ಗೆಯಿಂದಲೇ ವಿವಿಧ ಧಾರ್ಮಿಕ ಕಾರ್ಯಕ್ರಮಗಳ ಜತೆಯಲಿ ಅಮ್ಮನವರಿಗೆ ಪೂಜಾ ಕೈಂಕರ್ಯಗಳ ನಡುವೆ ವಿಶೇಷ ಅಲಂಕಾರಗೊಳಿಸಲಾಗಿತ್ತು.ಈ ವರ್ಷ ಮುಕ್ತಿ ಭಾವುಟದ ಹಾರಜಿನಲ್ಲಿ ಗ್ರಾಪಂ ಸದಸ್ಯ ನಾಗಭೂಷಣ 3.10ಲಕ್ಷ ರೂ.ಗೆ ಪಡೆದರು.ಈ ವೇಳೆಯಲ್ಲಿ ಹೂ ಮಾಲೆ ಜತೆಗೆ ಪ್ರಸಾದವನ್ನ ನೀಡಿ ಗೌರವಿಸಲಾಯಿತು. ಬಳಿಕ ರಥೋತ್ಸವಕ್ಕೆ ಹಿರಿಯರ ಸಮ್ಮುಖದಲ್ಲಿ ಚಾಲನೆ ನೀಡಲಾಯಿತು. ಬಳಿಕ ಒಪ್ಪತ್ತಿನಿಂದ ಭಕ್ತರು ಜಯಘೋಷದೊಂದಿಗೆ ರಥವನ್ನ ಎಳೆದರು.ವಿವಿಧ ಜನಪದ ವಾದ್ಯ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ರಂಗು ನೀಡಿದವು.ಶಾಸಕ ಟಿ.ರಘುಮೂರ್ತಿ ಸೇರಿದಂತೆ ಇನ್ನಿತತರು ದೇವರ ದರ್ಶನ ಪಡೆದರು.ರಾಜ್ಯ ಹಾಗೂ ನೆರೆ ಸಿಮಾಂಧ್ರದ ಭಕ್ತಾದಿಗಳು ಉಪಸ್ಥಿತರಿದ್ದರು.

# ಗೋಶಾಲೆಗಳಲ್ಲಿ ಜಾನುವಾರಗಳ ಸಂರಕ್ಷಣೆ ಜೊತೆಗೆ ಸ್ವಚ್ಛತೆ ಕಾಪಾಡಿ



» **ಚಳ್ಳಕೆರೆ**

ಬರಗಾಲದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಜಾನುವಾರುಗಳ ರಕ್ಷಣೆಗಾಗಿ ಗೋಶಾಲೆಗಳನ್ನು ಆರಂಭಿಸಿ ಅಲ್ಲಿ ಅವುಗಳಿಗೆ ಆಹಾರ, ನೀರಿನ ಜೊತೆಗೆ ಆರೋಗ್ಯವನ್ನು ಬಗ್ಗೆಯೂ ಗಮನ ನೀಡಲಾಗುತ್ತಿದೆ. ಗೋಶಾಲೆ ನಿರ್ವಹಣೆಯಲ್ಲಿ ಪಾರದರ್ಶಕತೆ ಇರಬೇಕು. ನಿಗದಿತ ಪ್ರಮಾಣದಲ್ಲಿ ಮೇವು ವಿತರಣೆ ಮಾಡಿ. ಜಾನುವಾರುಗಳಿಗೆ ಮೇವು ನೀಡುವ ಸಂದರ್ಭದಲ್ಲಿ ತಿನ್ನಲು ಅನುಕೂಲವಾಗುವಂತೆ ಮೇವು ಕತ್ತರಿಸಿ ಕೊಡಿ ಎಂದು ಪಶುಪಾಲನೆ ಮತ್ತು ಪಶುವೈದ್ಯ ಸೇವಾ ಇಲಾಖೆ ಆಯುಕ್ತೆ ಎ.ಶ್ರೀರೂಪ ನಿರ್ದೇಶನ ನೀಡಿದರು.

ಅವರು, ಶುಕ್ರವಾರ ತಾಲ್ಲೂಕಿನ ಅಜ್ಜಯ್ಯನಗುಡಿ ರಸ್ತೆ, ಚೌಳೂರು, ದೊಡ್ಡಉಳ್ಳಾರ್ತಿ ಹಾಗೂ ಹಿರೇಕೆರೆಕಾವಲಿನಲ್ಲಿರುವ ಗೋಶಾಲೆಗಳಿಗೆ ಭೇಟಿ ನೀಡಿ ಅಲ್ಲಿ ಪ್ರತಿನಿತ್ಯ ಜಾನುವಾರುಗಳಿಗೆ ವಿತರಣೆಯಾಗುತ್ತಿರುವ ಮೇವು, ನೀರು, ಇನ್ನಿತರೆ ಸೌಲಭ್ಯಗಳ ಬಗ್ಗೆ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಜಾನುವಾರುಗಳು ಬಹುತೇಕ ಮೇವನ್ನು ಅರ್ಥಬರ್ಥ ತಿಂದಿರುವುದನ್ನು ಗಮನಿಸಿದ ಅವರು, ಜಾನುವಾರುಗಳಿಗೆ ಮೇವು ನೀಡುವಾಗ ಕತ್ತರಿಸಿ ಕೊಡುವಂತೆ ಸೂಚಿಸಿದರು. ಇದೇ ಸಂದರ್ಭದಲ್ಲಿ ಅಧಿಕಾರಿಗಳಿಗೆ ಸೂಚನೆ ನೀಡಿದ ಅವರು, ಪ್ರತಿಯೊಂದು ಗೋಶಾಲೆಯಲ್ಲೂ ಸ್ವಚ್ಛತೆ ಕಾಪಾಡಿ, ಯಾವುದೇ ಕಾರಣಕ್ಕೂ ಗೋಶಾಲೆ ಒಳ ಮತ್ತು ಹೊರ ಆವರಣದಲ್ಲಿ ತ್ಯಾಜ್ಯವಸ್ತುಗಳ ಸಂಗ್ರಹ ಮಾಡಬೇಡಿ, ಗೋಶಾಲೆ ಎಂದರೆ ಸುಂದರ ಪರಿಸರ ಎಂಬ ಭಾವನೆ ಮೂಡಬೇಕು ಎಂದರು.

ಪಶುವೈದ್ಯ ಇಲಾಖೆ ಉಪನಿರ್ದೇಶಕ ಕುಮಾರ್, ಗೋಶಾಲೆ ನಿರ್ವಹಣೆಯಲ್ಲಿ ಈಗಾಗಲೇ ಹಲವು ಬಾರಿ ನಾನು ಮತ್ತು ಅಧಿಕಾರಿಗಳ ತಂಡ ಭೇಟಿ ನೀಡಿ ಸೂಚನೆ ನೀಡಿದ್ದೇವೆ. ಜಾನುವಾರುಗಳಿಗೆ ನೀಡುವ ಮೇವಿನ ಪ್ರಮಾಣವನ್ನು ಖಚಿತಪಡಿಸಿಕೊಂಡು ನೀಡಲಾಗುತ್ತಿದೆ. ಸದ್ಯದ ಸ್ಥಿತಿಯಲ್ಲಿ ಮುಂದೆ ಮಳೆ ಬರುವ ತನಕ ಗೋಶಾಲೆ ನಡೆಸುವ ಅನಿವಾರ್ಯತೆ ಇದೆ. ಆದರೆ, ವಾಸ್ತಾಂಶವನ್ನು ಅರಿತು ಇಲ್ಲಿ ಕಾರ್ಯನಿರ್ವಹಿಸಲಾಗುತ್ತಿದೆ.

ಪಶುವೈದ್ಯ ಇಲಾಖೆ ಸಹಾಯಕ ನಿರ್ದೇಶಕ ಡಾ.ರೇವಣ್ಣ ಮಾಹಿತಿ ನೀಡಿ, ಹಿರೇಕೆರೆಕಾವಲ್‌ನಲ್ಲಿ 850, ಚೌಳೂರು-490, ದೊಡ್ಡ ಉಳ್ಳಾರ್ತಿ 480, ಅಜ್ಜಯ್ಯನಗುಡಿ 375 ಜಾನುವಾರುಗಳಿದ್ದು, ಅವುಗಳಿಗೆ ಪ್ರತಿನಿತ್ಯ ನೀರು, ಮೇವು ಒದಗಿಸುವುದಲ್ಲದೆ, ಆರೋಗ್ಯ ತಪಾಸಣೆಯನ್ನೂ ಸಹ ಮಾಡಲಾಗುತ್ತಿದೆ. ಪ್ರಸ್ತುತ ಜಾನುವಾರುಗಳಿಗೆ ನಿಯಮಗಳಡಿ ಮೇವು ನೀಡಲಾಗುತ್ತಿದೆ ಮೇವಿನ ಕೊರತೆ ಇಲ್ಲವೆಂದರು.

ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ, ಪಶುವೈದ್ಯಾಧಿಕಾರಿ ಡಾ.ಇಂದ್ರಬಾಯಿ, ಉಪ ಕೃಷಿ ನಿರ್ದೇಶಕ ಪ್ರಭಾಕರ್, ಸಹಾಯಕ ಕೃಷಿ ನಿರ್ದೇಶಕ ಜೆ.ಅಶೋಕ್ ಮುಂತಾದವರು ಉಪಸ್ಥಿತರಿದ್ದರು.




Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T